ಸಂಪುಟ 01 | ಸಂಚಿಕೆ 93 | ಬುಧವಾರ 18 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಪ್ಲುಟೊ ದಿನ**

ಪ್ರತಿ ವರ್ಷ ಫೆಬ್ರವರಿ 18 ರಂದು, ನಾವು ಕುಬ್ಜ ಗ್ರಹ ಪ್ಲುಟೊವನ್ನು ಕಂಡುಹಿಡಿದ ದಿನಾಂಕವನ್ನು ಆಚರಿಸುತ್ತೇವೆ. ಈ ನಿಗೂಢ ಗ್ರಹವನ್ನು ಯಾರು ಕಂಡುಹಿಡಿದರು ಮತ್ತು ವರ್ಗೀಕರಣ ವಿವಾದದ ಚರ್ಚೆ ಏಕೆ ನಡೆಯುತ್ತಿದೆ ಎಂಬುದನ್ನು ಚರ್ಚಿಸಲು ನಾವು ಬಾಹ್ಯಾಕಾಶದಲ್ಲಿ ಪ್ರಯಾಣಿಸುವಾಗ ನಮ್ಮೊಂದಿಗೆ ಸೇರಿ.

**2) ರಾಷ್ಟ್ರೀಯ ಬ್ಯಾಟರಿ ದಿನ**

ರಾಷ್ಟ್ರೀಯ ಬ್ಯಾಟರಿ ದಿನದಿಂದ ಚಾರ್ಜ್ ಪಡೆಯಿರಿ! ಪ್ರತಿ ವರ್ಷ ಫೆಬ್ರವರಿ 18 ರಂದು ಆಚರಿಸಲಾಗುವ ಈ ದಿನವು ನಮ್ಮ ದೈನಂದಿನ ಜೀವನಕ್ಕೆ ಬ್ಯಾಟರಿಗಳು ಒದಗಿಸುವ ಅನುಕೂಲತೆಯನ್ನು ಶ್ಲಾಘಿಸಲು ಸಹಾಯ ಮಾಡುತ್ತದೆ.

## ಸುಭಾಷಿತ

ಅಹಂಕಾರವಿಲ್ಲದ ಮನುಷ್ಯ ಯಾವ ಧರ್ಮಗ್ರಂಥವನ್ನೂ ಓದದೆ, ಯಾವ ಮಂದಿರವನ್ನೂ ಪ್ರವೇಶಿಸದೆ ಮೋಕ್ಷ ಪಡೆಯಬಹುದು.

ಸ್ವಾಮಿ ವಿವೇಕಾನಂದ

# SSLC ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ–1ರ ಅಂತಿಮ ವೇಳಾಪಟ್ಟಿ ಪ್ರಕಟ

**ಬೆಂಗಳೂರು: ಎಸ್ಸೆಸ್ಸೆಲ್ಸಿ, ದ್ವಿತೀಯ ಪಿಯುಸಿ ಪರೀಕ್ಷೆ–1 ಅನ್ನು ವಿದ್ಯಾರ್ಥಿ ಸ್ನೇಹಿಯಾಗಿ ನಡೆಸಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಹಾಗೂ ಪೂರ್ವ ಸಿದ್ದತೆಯನ್ನು ಕೈಗೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು.**



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆಬ್ರವರಿ 28ರಿಂದ ಮಾ.17ರವರೆಗೂ ಬೆಳಗ್ಗೆ 10ರಿಂದ ಮಧ್ಯಾಹ್ನ 1 ಗಂಟೆವರೆಗೆ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತವೆ. ಮಾ.18ರಿಂದ ಏ.2ರವರೆಗೆ ಬೆಳಗ್ಗೆ 10ರಿಂದ ಮಧ್ಯಾಹ್ನ 1.15ರವರೆಗೆ ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ನಡೆಯುತ್ತವೆ ಎಂದು ಹೇಳಿದರು. ದ್ವಿತೀಯ ಪಿಯುಸಿ ಪರೀಕ್ಷೆ–1ಕ್ಕೆ 7,10,363 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಅವರಲ್ಲಿ 6,46,801 ಹೊಸಬರು, 50,540 ಪುನರಾವರ್ತಿತರು, 13,022 ಖಾಸಗಿ ಅಭ್ಯರ್ಥಿಗಳಿದ್ದಾರೆ. ವಿಜ್ಞಾನ ವಿಷಯದಲ್ಲಿ 2,92,645, ವಾಣಿಜ್ಯ ವಿಷಯದಲ್ಲಿ 2,11,174, ಕಲಾ ವಿಭಾಗದಲ್ಲಿ 1,42,982 ವಿದ್ಯಾರ್ಥಿಗಳು ನೊಂದಾಯಿತರಾಗಿದ್ದಾರೆ.

ಪರೀಕ್ಷೆಗಾಗಿ 5174 ಕಾಲೇಜುಗಳು ನೊಂದಾಯಿಸಿಕೊಂಡಿವೆ. 1217 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಏ.7ರಂದು ಪರೀಕ್ಷಾ ಫಲಿತಾಂಶ ಪ್ರಕಟಿಸುವ ಸಾಧ್ಯತೆ ಇದೆ. ವಿಫಲಗೊಂಡ ವಿದ್ಯಾರ್ಥಿಗಳಿಗಾಗಿ ಏ.25ರಿಂದ ಮೇ 9ರ ನಡುವೆ ಪರೀಕ್ಷೆ–2ನ್ನು ನಡೆಸಲು ದಿನಾಂಕ ನಿಗದಿಪಡಿಸಿದ್ದು, ಮೇ 22ರಂದು ಫಲಿತಾಂಶ ಪ್ರಕಟಿಸಲಾಗುವುದು ಎಂದರು. ಎಸ್ಸೆಸ್ಸೆಲ್ಸಿ ಪರೀಕ್ಷೆಗೆ 9,02,889 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಅವರಲ್ಲಿ 8,12,855 ವಿದ್ಯಾರ್ಥಿಗಳು ಹೊಸಬರು, 62,845 ಪುನರಾವರ್ತಿತರು, ಖಾಸಗಿ ಅಭ್ಯರ್ಥಿಗಳು 27,189 ಮಂದಿ ಇದ್ದಾರೆ. ಪರೀಕ್ಷೆಗಾಗಿ 15,941 ಶಾಲೆಗಳು ನೋಂದಾಯಿಸಿಕೊಂಡಿವೆ. 2,871 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಾ. 18ರಿಂದ ಏ.2ರವರೆಗೆ ಪರೀಕ್ಷೆ ನಡೆಯಲಿದ್ದು, ಏ.24ರಂದು ಫಲಿತಾಂಶ ಪ್ರಕಟಿಸುವ ಸಾಧ್ಯತೆಗಳಿವೆ.ವಿಫಲಗೊಂಡ ವಿದ್ಯಾರ್ಥಿಗಳಿಗಾಗಿ ಮೇ 18ರಿಂದ ಮೇ 25ರವರೆಗೆ 2ನೇ ಪರೀಕ್ಷೆ ನಡೆಸಲಾಗುವುದು. ಅದರ ಫಲಿತಾಂಶವನ್ನು ಜೂ.1ರಂದು ಪ್ರಕಟಿಸುವ ಸಾಧ್ಯತೆ ಇದೆ. ಈಗಾಗಲೇ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ವಿದ್ಯಾರ್ಥಿಗಳು ಯಾವುದೇ ಭಯ ಆತಂಕವಿಲ್ಲದೆ ಪರೀಕ್ಷೆ ಬರೆಯುವಂತೆ ಕರೆ ನೀಡಿದರು. ಪರೀಕ್ಷಾ ಅಕ್ರಮಗಳನ್ನು ತಡೆಯಲು ಎಲ್ಲೆಡೆ ವೆಬ್‌ಕಾಸ್ಟಿಂಗ್ ನಡೆಸಲಾಗುವುದು. ಕುಡಿಯುವ ನೀರು ಸೇ–ರಿದಂತೆ ಇತರೆ ಸೌಲಭ್ಯಗಳನ್ನು ಏರ್ಪಡಿಸಲು ಕ್ರಮ ಕೈಗೊಳ್ಳಲಾಗಿದೆ. ದೂರದೂರಿನಿಂದ ಬರುವ ವಿದ್ಯಾರ್ಥಿಗಳ ವಿವರವನ್ನು ಮೊದಲೇ ಪಡೆದುಕೊಂಡು ಅವರಿಗೆ ನಿಗದಿತ ಸಮಯಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ಜಿಲ್ಲಾಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ. ಪರೀಕ್ಷಾ ಪ್ರವೇಶ

4ನೇ ಪುಟಕ್ಕೆ

## ಶಿವರಾತ್ರಿ ಜಾಗರಣೆಗೆ ಹೋಗಿದ್ದವರ ಮನೆಗೆ ಕನ್ನ; 154 ಗ್ರಾಂ ಚಿನ್ನ, ಬೆಳ್ಳಿ ಕಳ್ಳತನ

❑ ನೈಜ್ಯ ದೇಸೆ ನ್ಯೂಸ್

**ವಿಜಯಪುರ:** ಮಹಾಶಿವರಾತ್ರಿ ಜಾಗರಣೆಯನ್ನೇ ಬಂಡವಾಳ ಮಾಡಿಕೊಂಡ ಖದೀಮರು ಶಿವರಾತ್ರಿ ಜಾಗರಣೆಗೆ ಹೋಗಿದ್ದವರ ಮನೆ ಕಳ್ಳತನ ಮಾಡಿರುವ ಘಟನೆ ವಿಜಯಪುರ ನಗರದ ಶಾರದಾ ನಗರದಲ್ಲಿ ನಡೆದಿದೆ.



ಸೋಮಶೇಖರ ಗಣಿ ಎಂಬವರ ಮನೆ ಕಳ್ಳತನ ಮಾಡಲಾಗಿದೆ. ಮನೆಯಲ್ಲಿದ್ದ 40 ಸಾವಿರ ನಗದು, 154 ಗ್ರಾಂ ಚಿನ್ನಾಭರಣ, 270 ಗ್ರಾಂ ಬೆಳ್ಳಿ ಆಭರಣ ಕದ್ದು ಖದೀಮರು ಪರಾರಿಯಾಗಿದ್ದಾರೆ. ಮನೆಗೆ ಬೀಗ ಹಾಕಿ ಶಿವಗಿರಿಗೆ ಕುಟುಂಬಸ್ಥರು ತೆರಳಿದ್ದರು. ಇಂಡಿಯಾ ಪಾಕ್ ಟಿ 20 ಕ್ರಿಕೆಟ್ ಮ್ಯಾಚ್ ಇದ್ದ ಕಾರಣ ಬೀದಿಯಲ್ಲೂ ಜನ–ರಿರಲಿಲ್ಲ. ಇದನ್ನೇ ಬಂಡವಾಳ ಮಾಡಿಕೊಂಡು ಕಳ್ಳರು ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ಸದ್ಯ ಸ್ಥಳಕ್ಕೆ ಗೋಲಗುಂಬಜ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೆರಳಚ್ಚು, ಶ್ವಾನದಳ ತಂಡಗಳಿಂದಲೂ ಪರೀಕ್ಷೆ ನಡೆದಿದೆ. ಗೋಲಗುಂಬಜ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಜೇವರ್ಗಿ–ಬಳ್ಳಾರಿ ರಸ್ತೆ ಮೇಲ್ದರ್ಜೆಗೇರಿಸಲು ಕೇಂದ್ರ ತೀರ್ಮಾನ



❑ ನೈಜ್ಯ ದೇಸೆ ನ್ಯೂಸ್

**ಬೀದರ್, ಕಲಬುರಗಿ ಜಿಲ್ಲೆಗಳಿಂದ ಜೇವರ್ಗಿ ಮೂಲಕ ಬಳ್ಳಾರಿ, ಹೊಸಪೇಟೆ ಮೂಲಕ ಮಧ್ಯ ಕರ್ನಾಟಕ ಹಾಗೂ ಬೆಂಗಳೂರಿಗೆ ಸಂಪರ್ಕ ಕಲ್ಪಿಸುವ ಜೇವರ್ಗಿ–ಚಾಮರಾಜನಗರ 150ಎ ರಾಷ್ಟ್ರೀಯ ಹೆದ್ದಾರಿಯನ್ನು ಮೇಲ್ದರ್ಜೆಗೇರಿಸಲು ಭೂಸಾರಿಗೆ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಖಾತೆ ಸಚಿವ ನಿತಿನ್ ಗಡ್ಕರಿ ಅವರು ತೀರ್ಮಾನಿಸಿದ್ದಾರೆ.**

ರಾಜ್ಯದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಗಳನ್ನು ಚತುಷ್ಪಥ, ಷಟ್ಪಥ ರಸ್ತೆಗಳನ್ನಾಗಿ ಅಭಿವೃದ್ಧಿಪಡಿಸಬೇಕು ಎಂದು ಇತ್ತೀಚೆಗೆ ಬೆಂಗಳೂರಿನಲ್ಲಿ ಗಡ್ಕರಿ ಅವರೊಂದಿಗೆ ನಡೆದ ಸಭೆಯಲ್ಲಿ ರಾಜ್ಯದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಮನವಿ ಸಲ್ಲಿಸಿದ್ದರು. ಬಿಜೆಪಿಯಿಂದ ಆಯ್ಕೆಯಾದ ಸಂಸದರು, ಲೋಕಸಭಾ ಸದಸ್ಯರು ಸಹ ರಾಜ್ಯದ ಹಲವು ರಸ್ತೆಗಳನ್ನು ಅಭಿವೃದ್ಧಿಪಡಿಸುವಂತೆ ಒತ್ತಾಯಿಸಿದ್ದರು. ಈ ಬೇಡಿಕೆಗೆ ಸ್ಪಂದಿಸಿದ ಸಚಿವ ಗಡ್ಕರಿ ಅವರು ರಾಜ್ಯದ ಆರು ಪ್ರಮುಖ ರಸ್ತೆಗಳನ್ನು ಮೇಲ್ದರ್ಜೆಗೇರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅಲ್ಲದೇ, ರಾಜ್ಯ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿದ್ದ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ವಹಿಸಿಕೊಂಡು ರಸ್ತೆಗಳನ್ನು ವಿಸ್ತರಣೆ ಮಾಡಬೇಕು ಎಂದು ಸೂಚನೆ ನೀಡಿದ್ದಾರೆ.

ಅದರಂತೆ ಜೇವರ್ಗಿ–ಬಳ್ಳಾರಿ ಮಧ್ಯದ 265 ಕಿ.ಮೀ. ಉದ್ದದ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ತನ್ನ ಅಧೀನಕ್ಕೆ ತೆಗೆದುಕೊಂಡು ಅಭಿವೃದ್ಧಿ ಕೆಲಸ ಶುರು ಮಾಡುವಂತೆ ಸೂಚನೆ ನೀಡಿದ್ದಾರೆ. ಜೇವರ್ಗಿ, ಶಹಾಪುರ, ಸುರಪುರದಿಂದ ಲಿಂಗಸುಗೂರುವರೆಗಿನ ರಸ್ತೆಯು ಹೆಸ–ರಿಗಷ್ಟೇ ರಾಷ್ಟ್ರೀಯ ಹೆದ್ದಾರಿಯಾಗಿತ್ತು. ರಸ್ತೆಗಳ ತುಂಬೆಲ್ಲ ತಗ್ಗುಗಳು, ಕಿರಿದಾದ ರಸ್ತೆ ಇದೆ. ಈ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಅಗತ್ಯದ ಕುರಿತು 'ಪ್ರಜಾವಾಣಿ' ವಿಶೇಷ ವರದಿಗಳನ್ನು ಪ್ರಕಟಿಸಿತ್ತು. ಜೇವರ್ಗಿ, ಶಹಾಪುರ, ಹೊಸಪೇಟೆ ಮಾರ್ಗದ ಮೂಲಕ ಬೆಂಗಳೂರಿಗೆ ಹೊರಡುವ ಬಸ್‌ಗಳು ಕೆಟ್ಟ ರಸ್ತೆಯಿಂದಾಗಿ ನಿಗದಿತ ಅವಧಿಗಿಂತ ತಡವಾಗಿ ತಲುಪುತ್ತಿವೆ. ಅದಕ್ಕಾಗಿಯೇ ತುರ್ತು ಕೆಲಸ ಇದ್ದವರು ರಾಯಚೂರು, ಮಂತ್ರಾಲಯ ಮಾರ್ಗವಾಗಿ ಬೆಂಗಳೂರಿಗೆ ಸಂಚರಿಸುತ್ತಿದ್ದಾರೆ.

## ನಾಗಲಿಕರ್ ಸಿಂಪಿ ಸಮಾಜದಿಂದ ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಸನ್ಮಾನ

❑ ನೈಜ್ಯ ದೇಸೆ ನ್ಯೂಸ್

ತಾಲೂಕಿನ ಜಾಲಿಹಾಳ ಜಡೇಶಂಕರಲಿಂಗ ದೇವಸ್ಥಾನದಲ್ಲಿ ನಾಗಲಿಕರ್ ಸಿಂಪಿ ಸಮಾಜದ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಾದ ಗೌರವಾಧ್ಯಕ್ಷ ಎಲ್. ಅಮರೇಶ ನಾಗಲಿಕರ್ ಮತ್ತು ಅಧ್ಯಕ್ಷ ಶರಣಪ್ಪ ನಾಗಲಿಕರ್, ಉಪಾಧ್ಯಕ್ಷ ಬಸವರಾಜ ಖಾನಾವಳಿ, ಅವರಿಗೆ ಮೂರನೇ ಮೈಲ್ ಕ್ಯಾಂಪ್ ಷ.ಬ್ರ. ರಂಭಾಪುರಿ ಶಾಖಾಮಠದ ಶ್ರೀ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಹಾಗೂ ಚೆನ್ನಯ್ಯಸ್ವಾಮಿ ಕಲ್ಮಠವರ ಸಮ್ಮುಖದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.



ಈ ವೇಳೆ: ನೂತನ ಪದಾಧಿಕಾ–ರಿಗಳಾದ ಸಂಗಪ್ಪ ಮಜ್ಜಿಗಿ, ರಮೇಶ ಟೆಲರ್ ಶರಣಪ್ಪ ಆರಾಪುರ, ಸದಸ್ಯರಾದ ಸಂಗಪ್ಪ ಗಿಡದ್, ಶಿವರಾಜ ನಾಗಲಿಕರ್, ಸುರೇಶ, ನಾಗರಾಜ ಜಾಲಿಹಾಳ, ಅಯ್ಯಪ್ಪ ಮುಕುಂದ ವೀರೇಶ ಗಬ್ಬೂರು, ಬಸವರಾಜ ಅರಸೂರು, ಪ್ರಶಾಂತ ಇತ್ನಾಳ್, ಸುಮಲತಾ ನಾಗಲಿಕರ್ ಬಸವರಾಜ ಟೆಲರಗ, ಗಣೇಶ ನಾಗಲಿಕರ್ ಶಂಕರ ನಾಗಲಿಕರ್, ರಾಜೇಶ ನಾಗಲಿಕರ್, ಸೇರಿದಂತೆ ಸಮಾಜದ ಎಲ್ಲಾ ಹಿತೈಷಿಗಳು, ಬಂಧುಗಳು, ಭಾಗವಹಿಸಿದ್ದರು.

# ಕಲಾವಿದ ಹುಸೇನ ಮಕಾನದಾರಗೆ ಸನ್ಮಾನ

❑ ನೈಜ್ಯ ದೇಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಫೌಂಡೇಶನ್(ರಿ) ಇದರ 9 ನೇ ವಾರ್ಷಿಕೋತ್ಸವದ ನಿಮಿತ್ತ ಹಮ್ಮಿಕೊಂಡ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಹಾಗೂ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಪಟ್ಟಣದ ಕಲಾವಿದ ಹುಸೇನ ಮಕಾನದಾರ ಇವರಿಗೆ "ಶ್ರೇಷ್ಠ ಕಲಾವಿದ" ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು.**

ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ, ಸಿದ್ದನಗೌಡ ಪಾಟೀಲ(ನಾವದಗಿ),ಪ್ರಭುಗೌಡ



ಮದರಕಲ್ಲ,ಸಂಗನಗೌಡ ಲಿಂಗದಳ್ಳಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮೆಹಬೂಬ ಕೆಂಭಾವಿ, ಇಬ್ರಾಹೀಮ ಮನ್ಸೂರ,ಮಹೆಬೂಬ ಖಾದ್ರಿ, ಹಸನಸಾಬ ಕೋರ್ಕಿ, ಫೌಂಡೇಶನ್ ಅಧ್ಯಕ್ಷ ಮೊಹಮ್ಮದ್ ಶಫೀಕ ಇನಾಮದಾರ,ಸಿಆರ್‌ಸಿ ರಾಜು ವಿಜಾಪುರ,ಶೌಕತ್ ಲಾಹೋರಿ,

# ಕಾರಟಗಿಯ ದರ್ಶನ್ ಅಭಿಮಾನಿಗಳಿಂದ ಕಾರುಣ್ಯಾಶ್ರಮದಲ್ಲಿ ಜನ್ಮದಿನ ಸಮಾರಂಭ

❑ ನೈಜ್ಯ ದೇಸೆ ನ್ಯೂಸ್

**ಸಿಂಧನೂರು: ಅಖಿಲ ಕರ್ನಾಟಕ ದರ್ಶನ್ ತೂಗುದೀಪ ಅಭಿಮಾನಿಗಳ ಸಂಘ (ರಿ)ಕಾರಟಗಿ ವತಿಯಿಂದ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರ 49ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತ–ರಿಸುವ ಮೂಲಕ ದರ್ಶನ್ ಅವರ ಹಲವಾರು ಸಮಾಜ ಪರವಾಗಿಗಳನ್ನು ನೆನಪಿಸಿಕೊಳ್ಳುತ್ತಾ ಅಭಿಮಾನಿಗಳಿಂದ ಜನ್ಮದಿನ ಸಮಾರಂಭ ಕಾರ್ಯಕ್ರಮ ನೆರವೇರಿತು.**




ಈ ಸಮಾರಂಭದಲ್ಲಿ ಆಶ್ರಮದ ಆಶ್ರಯದಾತರುಗಳ ವತಿಯಿಂದ ಕೇಕ್ ಕತ್ತರಿಸಿ ಜನ್ಮದಿನ ಆಚರಿಸಲಾಯಿತು.ಈ ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷರಾದ ಚಿರು ನಾಯಕ ಮಾತನಾಡಿ ನಮ್ಮ ದರ್ಶನ್ ಅವರು ಕಾನೂನನ್ನು ಪ್ರೀತಿಸಿ ಪೂಜಿಸುವಂತಹ ಅಭಿವ್ಯಕ್ತಿಯಾಗಿ ಇಂದು ಶಿಕ್ಷಗೊಳಪಟ್ಟಿದ್ದಾರೆ. ಆದರೆ ಅವರು ನಟಿಸಿರುವಂತಹ ಹಲವಾರು ಚಿತ್ರಗಳು ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡುತ್ತಾ ಸಮಾಜವನ್ನು ಕಾಪಾಡುವಂತಹ ನಿಟ್ಟಿನಲ್ಲಿ ಅವರ ನಟನೆ ಜಗತ್ತಿಗೆ ಹೆಸರಾಗಿತ್ತು.

ಇಂತಹ ನಮ್ಮ ಮೇರು ನಟನ ಜನ್ಮದಿನವನ್ನು ಕಾರುಣ್ಯ ಕುಟುಂಬದಲ್ಲಿ ಆಚರಿಸಿ ಇಲ್ಲಿರುವಂತಹ ಎಲ್ಲ ಹಿರಿಯರ ಆಶೀರ್ವಾದದೊಂದಿಗೆ ಆದಷ್ಟು ಬೇಗನೆ ನಮ್ಮ ಡಿ ಬಾಸ್ ಹೊರಗಡೆ ಬರಲಿ ಎನ್ನುವ ಆಶೀರ್ವಾದವನ್ನು ಬಯಸಿ ಇಂದು ಸರಳವಾಗಿ ಅವರ ಜನ್ಮದಿನವನ್ನು ಆಚರಣೆ ಮಾಡುತ್ತಿದ್ದೇವೆ ಎಂದು ಮಾತನಾಡಿದರು. ನಂತರ ಸಂಘದ ಅಧ್ಯಕ್ಷರಾದ ಶರಣು ಬಿಜಕಲ್ ಮಾತನಾಡಿ ದರ್ಶನ್ ಅವರ ಮಾರ್ಗದರ್ಶನ ಆದರ್ಶ ವ್ಯಕ್ತಿತ್ವವನ್ನು ನಾವುಗಳು ಮೈಗೂಡಿಸಿಕೊಂಡು ನಮ್ಮ ಡಿ ಬಾಸ್ ಜನ್ಮದಿನವನ್ನು ಈ ವರ್ಷ ಅತ್ಯಂತ ಸರಳವಾಗಿ ಆಚರಿಸುತ್ತಿದ್ದೇವೆ. ಸರಳವಾದರೂ ಸಹ ಕಾರುಣ್ಯ ಕುಟುಂಬದ ನಿಜವಾದ ದೇವರುಗಳ ಆಶೀರ್ವಾದ ನಮ್ಮ ದರ್ಶನ್ ಹಾಗೂ ಅವರ ಕುಟುಂಬ ಅಭಿಮಾನಿಗಳ ಮೇಲಿರಲಿ ಎನ್ನುವುದು ನಮ್ಮೆಲ್ಲರ ಆಶಯವಾಗಿದೆ.

ಹೊರಗಡೆ ಬಂದ ನಂತರ ಕಾರುಣ್ಯ ಆಶ್ರಮದ ಸೇವೆಯನ್ನು ಸವಿಸ್ತಾರವಾಗಿ ತಿಳಿಸಿ ಒಮ್ಮೆ ನಮ್ಮ ಈ ಕಾರುಣ್ಯ ಕುಟುಂಬಕ್ಕೆ ಅವರನ್ನು ಕರೆದುಕೊಂಡು ಬರುತ್ತೇವೆ ಎಂದು ಈ ಸಂದರ್ಭದಲ್ಲಿ ಭರವಸೆ ನೀಡುತ್ತಿದ್ದೇವೆ. ತೆರೆಯ ಹಿಂದೆ ಹಲವಾರು ಅನಾಥಾಶ್ರಮಗಳಿಗೆ ವೃದ್ಧಾಶ್ರಮಗಳಿಗೆ ಸಹಾಯ ಸಹಕಾರ ಮಾಡುತ್ತಾ ಹಲವಾರು ಸಮಾಜ ಪ್ರಕಾರಗಳನ್ನು ಮಾಡಿರುವ ನಮ್ಮ ಬಾಸ್ ಗೆ ಕಾರುಣ್ಯ ಆಶ್ರಮದ ಎಲ್ಲಾ ದೇವರ ಮಕ್ಕಳ ಆಶೀರ್ವಾದವಿರಲಿ ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಕಾರಟಗಿ ಅಖಿಲ ಕರ್ನಾಟಕ ದರ್ಶನ್ ತೂಗುದೀಪ ಅಭಿಮಾನಿಗಳ ಸಂಘದ ಅಭಿಮಾನಿಗಳಾದ ರಮೇಶ ನಾಯಕ. ರಾಜು ಸಾಲುಂಚಿಮರ ಕ್ಯಾಂಪ್. ಪ್ರಕಾಶ ಯರಡೋಣ. ಉಮೇಶ ಗೌಡ ಕಾರಟಗಿ. ಮಹಮ್ಮದ್ ಖಾಜಿ ಕಾರಟಗಿ ಮತ್ತು ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಮತ್ತು ಹಲವಾರು ದರ್ಶನ್ ಅಭಿಮಾನಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಸಂಜೆಯ ರಂಗು

ಹೊಂಬಣ್ಣದ ಸಂಜೆಯ ರಂಗು
ಕಾಣಲು ಮನ ಮುಗುಳ್ನಗೆ ಬೀರಿ
ನೋವುಗಳು ಮರೆಯಾಗಿ
ನಲಿಯುತ್ತಿದೆ ಹೃದಯ ಹಗುರಾಗಿ.!!

ನೇಸರನು ಭೂವಿಗೆ ವಿದಾಯ
ಹೇಳಿ ಮುತ್ತಿಟ್ಟು ಹೊರಟಂತೆ
ಗಿಡ ಮರ ನೋಡಿ ನಕ್ಕಂತೆ
ಕಂಡ ಮನದಲಿ ಬಣ್ಣದ ಚಿತ್ತಾರ.!!

**ಕವಿತಾ ಹಿರೇಮಠ**

# ಪ್ರವಾಸಿಗನ ಕೊಲೆ ಪ್ರಕರಣದಲ್ಲಿ ಮೂವರಿಗೆ ಗಲ್ಲು ಶಿಕ್ಷೆ

**ನೈಜ್ಯ ದೆಸೆ ನ್ಯೂಸ್**

**ಇಸ್ರೇಲ್ ಮಹಿಳೆ ಸೇರಿ ಇಬ್ಬರ ಮೇಲೆ ಅತ್ಯಾಚಾರ ಹಾಗೂ ಪ್ರವಾಸಿಗನ ಕೊಲೆ ಪ್ರಕರಣದಲ್ಲಿ ಮೂವರಿಗೆ ಗಲ್ಲು ಶಿಕ್ಷೆ ವಿಧಿಸಿ ಜಿಲ್ಲಾ ಹೆಚ್ಚುವರಿ ಮತ್ತು ಸತ್ರ ನ್ಯಾಯಾಲಯ ಐತಿಹಾಸಿಕ ತೀರ್ಪು ನೀಡಿದೆ. ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್ ಸೋಮವಾರ ಆರೋಪಿಗಳಿಗೆ ಮರಣ ದಂಡನೆ ವಿಧಿಸಿ ತೀರ್ಪು ಪ್ರಕಟಿಸುತ್ತಿದ್ದಂತೆ ಕೋರ್ಟ್‌ನಲ್ಲಿ ಹಾಜರಿದ್ದ ಆರೋಪಿಗಳು ಬಿಕ್ಕಳಿಸಿ ಅತ್ತರು.**



ಸಂಗಾಪುರ ಸಾಯಿನಗರದ ಗೌಂಡಿ ಕಾರ್ಮಿಕ ಮಲ್ಲೇಶ ಅಲಿಯಾಸ್ ಹಂದಿ ಮಲ್ಲ ಅಯ್ಯಪ್ಪ ದಾಸರ, ಮೇಷನ್ ಕೆಲಸಗಾರ ಚೇತನ್ ಸಾಯಿ ಕಾಮೇಶ್ವರರಾವ್, ಶರಣಪ್ಪ ಅಲಿಯಾಸ್ ಶರಣಬಸವರಾಜ್ ಎಂಬುವರು ಶಿಕ್ಷೆಗೊಳಗಾದ ಅಪರಾಧಿಗಳು. ಇಸ್ರೇಲ್ ಮಹಿಳೆ ಸೇರಿದಂತೆ ಸ್ಥಳೀಯ ಮತ್ತೊಬ್ಬ ಮಹಿಳೆ ಮೇಲೆ ಅತ್ಯಾಚಾರ, ಓರ್ವ ಪ್ರವಾಸಿಗರ ಕೊಲೆ ಮತ್ತು ಅಮೆರಿಕ ಮತ್ತು ಮಹಾರಾಷ್ಟ್ರದ ತಲಾ ಒಬ್ಬ ಪ್ರವಾಸಿಗರನ್ನು ತುಂಗಭದ್ರಾ ಎಡದಂಡೆ ನಾಲೆಗೆ ತಳ್ಳಿ ಕೊಲೆಗೆ ಯತ್ನಿಸಿದ ಪ್ರಕರಣದಲ್ಲಿ ಆರೋಪಿಗಳಿಗೆ ಶಿಕ್ಷೆ ಪ್ರಕಟಿಸಲಾಗಿದೆ. ಅತ್ಯಾಚಾರ, ದರೋಡೆ, ಕೊಲೆ, ಸಂಚು, ಹಲ್ಲೆ, ದೌರ್ಜನ್ಯ ಸೇರಿದಂತೆ ಇತರ ಅಂಶಗಳನ್ನು ಪ್ರಕರಣದಲ್ಲಿ ಮನಗಂಡ ನ್ಯಾಯಾಧೀಶರು, ಒಂದು ಪ್ರಕರಣದಲ್ಲಿ ಮರಣ ದಂಡನೆ (ಬಿಎನ್‌ಎಸ್–301) ಉಳಿದ ಐದು ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ವಿಧಿಸಿ ಆದೇಶಿಸಿದರು. ಎಲ್ಲ ಆಯಾಮಗಳಲ್ಲಿ ವಿಚಾರಣೆ ನಡೆಸಿದ ಜಿಲ್ಲಾ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯಕ್ ಅವರು ಆರೋಪಿಗಳಿಗೆ ಮರಣ ದಂಡನೆ ವಿಧಿಸಿ ಐತಿಹಾಸಿಕ ಆದೇಶ ಮಾಡಿದ್ದಾರೆ. ಆದೇಶದ ಪ್ರತಿಯನ್ನು ಹೈಕೋರ್ಟ್‌ಗೆ ಸಲ್ಲಿಸಲಾಗುವುದು. ಅಲ್ಲಿ ಪರಿಶೀಲನೆ ಮಾಡಿದ ಬಳಿಕ ಆದೇಶ ಜಾರಿಯಾಗುತ್ತದೆ ಎಂದು ಸರ್ಕಾರಿ ಅಭಿಯೋಜಕಿ ನಾಗಲಕ್ಷ್ಮಿ ಹೇಳಿದರು. ಐತಿಹಾಸಿಕ ತೀರ್ಪು ಕೊಪ್ಪಳ ಜಿಲ್ಲೆ ರಚನೆಯಾಗಿ ಎರಡೂವರೆ ದಶಕಗಳಲ್ಲಿ ಇದುವರೆಗೂ ನ್ಯಾಯಾಲಯದಿಂದ ಮರಣದಂಡನೆ ಶಿಕ್ಷೆ ಪ್ರಕಟವಾಗಿರಲಿಲ್ಲ. ಆದರೆ, ಇದೇ ಮೊದಲ ಬಾರಿಗೆ ಇಬ್ಬರು ಮಹಿಳೆಯರ ಮೇಲಿನ ಅತ್ಯಾಚಾರ, ಒಬ್ಬ ಪ್ರವಾಸಿಗನ ಕೊಲೆ ಪ್ರಕರಣದಲ್ಲಿ ಮರಣ ದಂಡನೆ ವಿಧಿಸುವ ಮೂಲಕ ಇಲ್ಲಿನ ಜಿಲ್ಲಾ ಕೋರ್ಟ್ ಐತಿಹಾಸಿಕ ತೀರ್ಪು ಪ್ರಕಟಿಸಿದೆ. ಮರಕುಂಬಿಯಲ್ಲಿ ನಡೆದಿದ್ದ ದಲಿತ–ಸವರ್ಣೀಯರ ಗಲಾಟೆ ಪ್ರಕರಣದಲ್ಲಿ ದಲಿತರ ಮನೆಗಳನ್ನು ಸುಡಲಾಗಿತ್ತು ಎಂಬ ಪ್ರಕರಣದಲ್ಲಿ ಕೊಪ್ಪಳದ ಜಿಲ್ಲಾ ಕೋರ್ಟ್ 98 ಜನರಿಗೆ ಜೀವಾವಧಿ ಶಿಕ್ಷೆ ನೀಡಿತ್ತು. ಇದು ಕೊಪ್ಪಳ ಜಿಲ್ಲೆಯ ನ್ಯಾಯಾಲಯದ ಇತಿಹಾಸದಲ್ಲಿ ದೊಡ್ಡ ತೀರ್ಪಾಗಿತ್ತು. ಆದರೆ, 2025ರ ಮಾರ್ಚ್ 6ರಂದು ಗಂಗಾವತಿ ತಾಲೂಕಿನ ಸಣಾಪುರದಲ್ಲಿ ನಡೆದಿದ್ದ ಇಸ್ರೇಲ್ ದೇಶದ ಮಹಿಳೆಯ ಮೇಲಿನ ಅತ್ಯಾಚಾರ ಪ್ರಕರಣ ದೇಶಾದ್ಯಂತ ಭಾರೀ ಸುದ್ದಿಯಾಗಿತ್ತು. ಪ್ರಕರಣದ ವಿವರ: ಹಂಪಿ – ಆನೆಗೊಂದಿ ಭಾಗದಲ್ಲಿ ಪ್ರವಾಸಕ್ಕೆ ಬಂದಿದ್ದ ಇಸ್ರೇಲ್ ಮಹಿಳೆ, ಸ್ಥಳೀಯ ಹೊಟೇಲ್‌ವೊಂದರ ಮಾಲಕಿ ಸೇರಿ ಇಬ್ಬರು ತುಂಗಭದ್ರಾ ಎಡದಂಡೆ ಕಾಲುವೆ ಪಕ್ಕದ ಹೊಟೇಲ್ ಬಳಿ ರಾತ್ರಿಯ ಕತ್ತಲು ಅಸ್ವಾದಿಸುತ್ತಾ ಗಿಟಾರು ಬಾರಿಸುತ್ತಾ ಕುಳಿತಿದ್ದರು. ತಡರಾತ್ರಿ ಸ್ಥಳಕ್ಕೆ ಆಗಮಿಸಿದ ಈ ದುರುಳರು, ಇಬ್ಬರ ಮೇಲೆ ಅತ್ಯಾಚಾರ ಎಸಗಿದ್ದರು. ಬಿಡಿಸಲು ಬಂದಿದ್ದ ಅಮೆರಿಕದ ಡೇನಿಯಲ್, ಮಹಾರಾಷ್ಟ್ರದ ನಾಸಿಕ್‌ನ ಪಂಕಜ್ ಪಟೇಲ್ ಮತ್ತು ಒಡಿಶಾದ ಬಿಬಾಸ್ ಎಂಬ ಯುವಕರ ಮೇಲೆ ಹಲ್ಲೆ ಮಾಡಿದ್ದರು. ಬಳಿಕ ಬಿಬಾಸ್ (43) ಎಂಬಾತನನ್ನು ಎಡದಂಡೆ ಕಾಲುವೆಗೆ ತಳ್ಳಿ ಕೊಲೆ ಮಾಡಿದ್ದರು. 6 ತಿಂಗಳಲ್ಲಿ ಆದೇಶ: ಮಹಿಳೆಯರ ಮೇಲೆ ಅತ್ಯಾಚಾರ ಮತ್ತು ಒಬ್ಬ ಪ್ರವಾಸಿಗನ ಕೊಲೆ ಮಾಡಿದ ಪ್ರಕರಣವು, ನ್ಯಾಯಾಲಯಕ್ಕೆ ಬಂದ ಕೇವಲ ಆರು ತಿಂಗಳಲ್ಲಿ ತ್ವರಿತಗತಿಯಲ್ಲಿ ವಿಚಾರಣೆ ಮಾಡಿ ಆದೇಶ ಜಾರಿ ಮಾಡಿರುವುದು ಗಂಗಾವತಿಯ ನ್ಯಾಯಾಲಯದ ಇತಿಹಾಸದಲ್ಲಿ ಇದೇ ಮೊದಲು ಎಂದು ವಕೀಲರು ಹೇಳಿದ್ದಾರೆ. ಕಳೆದ 2025ರ ಮಾರ್ಚ್ 6ರಂದು ಪ್ರಕರಣ ನಡೆದಿತ್ತು. ದೋಷಾರೋಪ ಪಟ್ಟಿ ಸಲ್ಲಿಸಲು ಪೊಲೀಸ್ ಇಲಾಖೆಗೆ 90 ದಿನಗಳ ಕಾಲವಕಾಶವಿತ್ತು. ಕೆಳ ಹಂತದ ನ್ಯಾಯಾಲಯದಲ್ಲಿ ಆರೋಪ ಪಟ್ಟಿ ಸಲಿಸಿದ ಬಳಿಕ ಜಿಲ್ಲಾ ನ್ಯಾಯಾಲಯಕ್ಕೆ ಪ್ರಕರಣ ವಿಚಾರಣೆಗೆ ಬಂದ ಕೇವಲ ಆರು ತಿಂಗಳಲ್ಲಿ ಆರೋಪಿಗಳಿಗೆ ಶಿಕ್ಷೆ ಪ್ರಕಟವಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಕ್ತಹೀನತೆ ಕುರಿತು ತಾಯಂದಿರಿಗೆ ಜಾಗೃತಿ ಸಭೆ

**ನೈಜ್ಯ ದೆಸೆ ನ್ಯೂಸ್**



**ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ರಾಯಚೂರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕು ಆರೋಗ್ಯಾ ಧಿಕಾರಿಗಳ ಕಾರ್ಯಾಲಯ ಸಿಂಧನೂರು ಮಕ್ಕಳ ಮತ್ತು ಶಿಶು ಅಭಿವೃದ್ಧಿ ಇಲಾಖೆ ಸಿಂಧನೂರು ಇವರ ಸಂಯುಕ್ತಾಶ್ರಯ ದಲ್ಲಿ ಅಂಗನವಾಡಿ ಕೇಂದ್ರ ಬಡಿಬೇಸ, ದೇಹದಲ್ಲಿ ಕಬ್ಬಿಣಾಂಶದ ಕೊರತೆಯೇ ರಕ್ತಹೀನತೆಗೆ ಕಾರಣ ಆರೋಗ್ಯವಂತ ತಾಯಿ ಆರೋಗ್ಯವಂತ ಮಗು ಕುರಿತು ತಾಯಂದಿರ ಸಭೆಯಲ್ಲಿ ಶ್ರೀಮತಿ ಗೀತಾ ಹಿರೇಮಠ್ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಾತನಾಡಿದರು.**

ಎಲ್ಲಾ ವಯಸ್ಸಿನವರು ತಮ್ಮ ದಿನನಿತ್ಯದ ಆಹಾರ ಸೇವನೆಯಲ್ಲಿ ಕಬ್ಬಿಣಾಂಶ ಪೋಲಿಕ್ ಆಮ್ಲ ಮಾತ್ರೆ, ಃ12 ತುಣ, ಹೆಚ್ಚಾಗಿರುವ ಆಹಾರ ಪದಾರ್ಥಗಳನ್ನು ತಪ್ಪದೇ ತಿಳಿಸುವುದು ಗರ್ಭಿಣಿಯರು ಎರಡನೆಯ ತ್ರೈಮಾಸಿಕದಲ್ಲಿ ಜಂತುಹುಳು ನಿವಾರಕ ಮಾತ್ರಗಳನ್ನು, ಸೇಂಗಾ ಎಳ್ಳು ಬೆಲ್ಲ ಹಸಿರು ತರಕಾರಿ ಖರ್ಜುರಾ, ಒಣ ದ್ರಾಕ್ಷಿ ಸೇವನೆ ಮಾಡುವುದು ತೊಂದರೆಗಳನ್ನು ತಡೆಗಟ್ಟಲು ಸಹಾಯ ಮಾಡುತ್ತದೆ ಕಬ್ಬಿಣಾಂಶದ ಮಾತ್ರೆಗಳ ಸೇವನೆ ಎಲ್ಲಾ ಗರ್ಭಿಣಿಯರ ಐದು ತಿಂಗಳ ಅವಧಿಯಿಂದ ಒಂದು (ಐರನ್ ಪೋಲೀಕ್ ಆಮ್ಲ) ಮಾತ್ರೆಯನ್ನ ಪ್ರತಿದಿನ ಒಂದರಂತೆ ತಪ್ಪದೆ ಸೇವಿಸಬೇಕು ಅತಿ ಹೆಚ್ಚು ತರಕಾರಿ ಸೇವನೆ ಮಾಡಬೇಕು ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅಥವಾ ಆಸ್ಪತ್ರೆಗೆ ಭೇಟಿ ನೀಡಿ ಹಿಮೋಗ್ಲೋಬಿನ್ ಪರೀಕ್ಷೆ ಮಾಡಿಕೊಳತಕ್ಕದ್ದು,

ರಕ್ತ ಹೀನತೆಗೆ ಕಾರಣಗಳು ದಿನನಿತ್ಯ ಆಹಾರದಲ್ಲಿ ಸಾಕಷ್ಟು ಪ್ರಮಾಣದಲ್ಲಿ ರಕ್ತ ಉತ್ಪತ್ತಿಗೆ ಬೇಕಾದ ಕಬ್ಬಿಣ ಅಂಶ ಪೋಲೀಕ್ ಆಸಿಡ್, ವಿಟಮಿನ್ ಬಿ12 ಮುಂತಾದ ಪೋಷಕಾಂಶವಿರುವ ಆಹಾರ ಪದಾರ್ಥಗಳನ್ನು ಸೇವಿಸದೆ ಇರುವುದು ಜಂತುಹುಳು ಕೊಕ್ಕೆ ಹುಳು ಮುಂತಾದ ಸೋಂಕಿಗೆ ತುತ್ತಾಗುವುದು ಬಯಲಿನಲ್ಲಿ ಮಲವಿಸರ್ಜನೆ ಮಾಡುವುದು ಶೌಚಾಲಯ ಬಳಸದೆ ಇರುವುದು ಸಾಬೂನು ಮತ್ತು ನೀರಿನಿಂದ ಕೈ ಕಾಲುಗಳನ್ನು ತೊಳೆಯದೆ ಇರುವುದು ಪಾದರಕ್ಷೆಗಳನ್ನು ಬಳಸದೆ ಇರುವುದು ಹೊರಗಡೆ ಸುತ್ತಾಡುವುದು ಮಹಿಳೆಯರಲ್ಲಿ ಮುಟ್ಟಿನ ಬೇಳೆ ಅತಿಯಾದ ರಕ್ತಸ್ರಾವಾಗುವಂತದ್ದು

ಗರ್ಭಿಣಿಯರಲ್ಲಿ ರಕ್ತ ಹೀನತೆಯ ಪರಿಣಾಮ ಕಡಿಮೆ ತೂಕ ಮಗುವಿನ ಜನನ ಮಗು ಸತ್ತು ಹುಟ್ಟುವುದು ಹೆರಿಗೆ ಸಮಯದಲ್ಲಿ ಮರಣ ಹೆರಿಗೆಯ ಮುಂಚೆ ಮತ್ತು ಹೆರಿಗೆಯ ಸಮಯದಲ್ಲಿ ಅತಿಯಾದ ರಕ್ತಸ್ರಾವ ಅವಧಿಗೆ ಮೊದಲೇ ಹೆರಿಗೆಯಾಗುವುದು ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಗರ್ಭಿಣಿಯರ ರಕ್ತ ಹೀನತೆ ವರ್ಗೀಕರಣ 11ಗ್ರಾಂ, ಇರಬೇಕು, 7 ಕ್ಕಿಂತ ಕಡಿಮೆ ಇದ್ದರೆ ಹೆಚ್ಚಿನ ಚಿಕಿತ್ಸೆ ಪಡೆಯಬೇಕು, ನಂತರ ಬಾಲ್ಯ ವಿವಾಹದ ಕುರಿತು ಹಾಗೂ ಸ್ವಚ್ಛತೆಯ, ಪೌಷ್ಟಿಕ ಆಹಾರದ ಸೇವನೆ ಬಹಳ ಮುಖ್ಯ ಬೇಸಿಗೆ ಕಾಲದಲ್ಲಿ ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ತೆಗೆದು ಕೊಳ್ಳಬೇಕು ಎಂದು ತಿಳಿಸಿದರು. ಸದರಿ ಕಾರ್ಯಕ್ರಮದಲ್ಲಿ ಶಮಿನ ಕಊಅಔ, ಶೈನಜ ಆಶಾಕಾರ್ಯಕರ್ತೆ, ದಿಲಶಾದ ಅಂಗನವಾಡಿ ಕಾರ್ಯಕರ್ತೆ, ಸಾವಿತ್ರಿ ಅಂಗನವಾಡಿ ಸಹಾಯಕಿ, ಗರ್ಭಿಣಿ ತಾಯಂದಿರು ಭಾಗವಹಿಸಿದ್ದರು.

# ‘ಸ್ವಚ್ಛೋತ್ಸವ’ ಕಾರ್ಯಕ್ರಮಕ್ಕೆ ಚಾಲನೆ




**ನೈಜ್ಯ ದೆಸೆ ನ್ಯೂಸ್**

**ತಾಳಿಕೋಟೆ: ಪಟ್ಟಣದ ಪುರಸಭೆ ವತಿಯಿಂದ ಸ್ವಚ್ಛತೆಯ ಕುರಿತು ಜನಜಾಗೃತಿಗಾಗಿ “ಸ್ವಚ್ಛೋತ್ಸವ’ ಕಾರ್ಯಕ್ರಮವನ್ನು ಸೋಮವಾರ ಬೆಳಿಗ್ಗೆ ಆಯೋಜಿಸಿತ್ತು. ಇದರಂಗವಾಗಿ ಪಟ್ಟಣದ ಖಾಸ್ಗತೇಶ್ವರಮಠದಿಂದ ಎಸ್.ಕೆ.ನಗರದ ಉದ್ಯಾನದವರೆಗೆ ಬೈಕ್ ರ್‍ಯಾಲಿ ಮಾಡಲಾಯಿತು.**

ಎಸ್.ಕೆ.ಉದ್ಯಾನದಲ್ಲಿ ಸ್ವಚ್ಛತಾ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದ ಖಾಸ್ಗತೇಶ್ವರಮಠದ ಪೀಠಾಧಿಪತಿ ಸಿದ್ಧಲಿಂಗದೇವರು, ನಗರದ ಸ್ವಚ್ಛತೆಯಿಂದ ನಗರದ ಸೌಂದರ್ಯ ಹೆಚ್ಚುವುದು. ನಾಗರಿಕರ ಆರೋಗ್ಯದ ಸುಧಾರಣೆಯೂ ಆಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಮನೆ, ಮನೆಯಂಗಳದ ಸ್ವಚ್ಛತೆಯ ಜೊತೆಗೆ ಕಸವನ್ನು ಹಾದಿ, ಬೀದಿಗಳಲ್ಲಿ, ಚರಂಡಿಗಳಲ್ಲಿ ಚೆಲ್ಲಬಾರದು, ಪುರಸಭೆಯ ಕಸ ಸಂಗ್ರಹದ ವಾಹಗಳಿಗೆ ಮನೆಯ ಕಸವನ್ನು ನೀಡಬೇಕು. ಮನೆಯ ಕಸವನ್ನು ಹಸಿ ತ್ಯಾಜ್ಯ, ಒಣ ತ್ಯಾಜ್ಯಗಳನ್ನು ಪ್ರತ್ಯೇಕಿಸಿ ನೀಡಬೇಕು.

ಜೀವ ಜಗತ್ತಿಗೆ ಅಪಾಯಕಾರಿಯಾಗಿ ಪರಿಣಮಿಸಿರುವ ಪ್ಲಾಸ್ಟಿಕ್ ಬಳಕೆಯನ್ನು ಹಂತಹಂತವಾಗಿ ಕಡಿಮೆಗೊಳಿಸುತ್ತ ಹೋಗಬೇಕು. ಪ್ಲಾಸ್ಟಿಕ್ ಚೀಲ ಬಳಸದೇ ಬಟ್ಟೆ ಚೀಲಗಳನ್ನು ಬಳಸಬೇಕು ಎಂದರು. ಇದಕ್ಕೂ ಮೊದಲು ಉದ್ಯಾನದ ಸ್ವಚ್ಛತೆಯಲ್ಲಿ ಪಾಲ್ಗೊಂಡರು. ಸ್ವಚ್ಛತಾ ರ್‍ಯಾಲಿ ಹಾಗೂ ಪಟ್ಟಣದ ಎಸ್ ಕೆ ನಗರ ಉದ್ಯಾನವನ ‘ಸ್ವಚ್ಛೋತ್ಸವ’ ಕಾರ್ಯಕ್ರಮ ದಲ್ಲಿ ಪಟ್ಟಣದ ಹಸಿರು ಸಂಪದ ಬಳಗದ ಉಪಾಧ್ಯಕ್ಷರುಗಳಾದ ಜೈಸಿಂಗ ಮೂಲಿಮನಿ, ಶಫೀಕ ಇನಾಮದಾರ, ಆರ್.ವಿ.ಜಾಲವಾದಿ, ಸಂಚಾಲಕ ಎಸ್.ಎಸ್. ಗಡೇದ, ಪದಾಧಿಕಾರಿಗಳಾದ ಪ್ರಶಾಂತ ಜನಾದ್ರಿ, ಅರಣ್ಯ ಇಲಾಖೆಯ ಮಹಾಂತೇಶ ಹಾದಿಮನಿ,

ಪುರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಫಿರೋಜ ಮುಲ್ಲಾ, ಕಿ.ಆ.ನಿ. ರಾದ ಶಿವಾನಂದ ಜುಮನಾಳ ಮತ್ತು ರಂಗನಾಥ ಅಜಮನಿ, ಸಿಬ್ಬಂದಿ ಸಹಾಯಕ ಶ್ರೀಪಾದ ಜೋಶಿ, ಲೆಕ್ಕಾಧಿಕಾರಿ ಸಿದ್ಧಲಿಂಗ ಚೊಂಡಿಪಾಟೀಲ, ಸಿದ್ದು ಕೊಳ್ಳಿ, ಅಶೋಕ ಕಟ್ಟಿಮನಿ, ಸಮುದಾಯ ಸಂಘಟಕರು, ಪೌರ ಕಾರ್ಮಿಕರು. ‘ಸ್ವಚ್ಛತೋತ್ಸವ’ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ತಾಳಿಕೋಟೆ:ಪಟ್ಟಣದ ಪುರಸಭೆ ವತಿಯಿಂದ ಸ್ವಚ್ಛತೆಯ ಕುರಿತು ಜನಜಾಗೃತಿಗಾಗಿ “ಸ್ವಚ್ಛೋತ್ಸವ’ ಕಾರ್ಯಕ್ರಮವನ್ನು ಖಾಸ್ಗತೇಶ್ವರಮಠದ ಪೀಠಾಧಿಪತಿ ಸಿದ್ಧಲಿಂಗದೇವರು ಉದ್ಘಾಟಿಸಿ ಸೋಮವಾರ ಮಾತನಾಡಿದರು.

# ವಿ.ಬಿ ಜಿ ರಾಮ್ ಜಿ ಯೋಜನೆಯನ್ನು ರದ್ದುಗೊಳಿಸಲು ಕಾಂಗ್ರೆಸ್ ಪ್ರತಿಭಟನೆ .

**ನೈಜ್ಯ ದೆಸೆ ನ್ಯೂಸ್**



**ಲಿಂಗಸಗೂರು: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಮರು ಜಾರಿಗೊಳಿಸಿ, ಸದ್ಯ ಜಾರಿಗೆ ತಂದಿರುವ ವಿಬಿ–ಜಿ ರಾಮ್ ಜಿ’ ಯೋಜನೆಯನ್ನು ಹಿಂಪಡೆಯಬೇಕೆಂದು ಒತ್ತಾಯಿಸಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಪ್ರತಿಭಟನೆ ನಡೆಸಿ ಸಹಾಯಕ ಆಯುಕ್ತರ ಮೂಲಕ ರಾಷ್ಟ್ರಪತಿಗಳಿಗೆ ಮನವಿಯನ್ನು ಸಲ್ಲಿಸಿದರು.**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು 2005 ರಲ್ಲಿ ಜಾರಿಗೆ ಬಂದಂತಹ, ವಿಶ್ವದಲ್ಲಿಯೇ ಅತಿಹೆಚ್ಚು ಗ್ರಾಮೀಣ ಭಾಗದ ಜನರಿಗೆ ಖಾತರಿಯ ಉದ್ಯೋಗವನ್ನು ಒದಗಿಸಿದ ಯೋಜನೆಯಾಗಿದೆ. ಇದರಿಂದ ಕಳೆದ 20 ವರ್ಷಗಳಿಂದ ಗ್ರಾಮೀಣ ಭಾಗದ ಜನರ ಜೀವನ ಸುಧಾರಣೆಯಾಗಿದ್ದು, ಗ್ರಾಮಕ್ಕೆ ಅವಶ್ಯವಿರುವ ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಿ, ಗ್ರಾಮೀಣ ಭಾಗವನ್ನು ಅಭಿವೃದ್ಧಿ ಪಡಿಸಿದೆ. ಗಾಂಧೀಜಿಯವರ ಕನಸಾದಂತಹ ಹಳ್ಳಿಗಳ ಅಭಿವೃದ್ಧಿಯೇ ದೇಶದ ಅಭಿವೃದ್ಧಿಯನ್ನುವುದನ್ನು ಈ ಯೋಜನೆಯು ಈಡೇರಿಸಿದೆ.

ಈ ಯೋಜನೆಯಿಂದ ಹಳ್ಳಿಯಿಂದ ಪಟ್ಟಣದೆಡೆಗೆ ವಲಸೆ ಹೋಗುತ್ತಿದ್ದ ಕಾರ್ಮಿಕರಿಗೆ ಅವರ ಊರಿನಲ್ಲಿಯೇ, ಉದ್ಯೋಗದ ಖಾತರಿಯನ್ನು ನೀಡಿ, ಅವರ ಬದುಕಿಗೆ ಬೆಳಕಾಗಿದ್ದ ಯೋಜನೆಯಾಗಿದೆ, ಕೇಂದ್ರ ಸರ್ಕಾರ ರಾಜ್ಯಗಳಿಗೆ ಸಿಗಬೇಕಾದ ಅನುದಾನವನ್ನು ನೀಡದೇ ವಂಚಿಸುತ್ತಿದ್ದು, ಸದರಿ ಯೋಜನೆಯ ಹೆಚ್ಚಿನ ಆರ್ಥಿಕ ಹೊರೆಯನ್ನು ರಾಜ್ಯಗಳಿಗೆ ಹೊರಿಸುತ್ತಿದೆ. ಗ್ರಾಮೀಣ ಪ್ರದೇಶದ ಜನರ ದುಡಿಯುವ ಹಕ್ಕನ್ನು ಕಿತ್ತಿಕೊಳ್ಳುವುದು ನ್ಯಾಯ ಸಮ್ಮತವಲ್ಲ. ಸದ್ಯ ಜಾರಿಗೆ ತಂದಿರುವ ’ವಿಬಿ–ಜಿ ರಾಮ್ ಜಿ’ ಯೋಜನೆಯನ್ನು ಹಿಂಪಡೆದು.

ಜನರ ಜೀವನವನ್ನು ಸುಭದ್ರಗೊಳಿಸುವ ಮತ್ತು ಉದ್ಯೋಗದ ಖಾತರಿಯ ಹಕ್ಕನ್ನು ನೀಡಿರುವ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ಮನರೇಗಾ) ಯೋಜನೆಯನ್ನು ಮರುಜಾರಿಗೊಳಿಸಲು ಒತ್ತಾಯಿಸಿ ಪ್ರತಿಭಟನೆ ನಡೆಸಿದರು . ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ ಎಸ್ ಹುಲಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಅಮರೇಶ ಹೆಸರೂರು, ಎಂ ಡಿ ರಫಿ,ವೆಂಕಟೇಶ್ ಗುತ್ತೇದಾರ, ಶರಣಬಸವ ಮೇಟಿ, ತಮ್ಮಣ್ಣ ಗುತ್ತೇದಾರ್, ಎಸ್ ಆರ್ ರಸೂಲ, ನಾವಾಬ್, ಅಮರೇಶ್ ಮಡ್ಡಿ. ಸಂಜೀವಪ್ಪ ಹುನಕುಂಟಿ, ಉಮೇಶ್, ವಿಜಯಲಕ್ಷ್ಮಿ ದೇಸಾಯಿ, ಗಂಗಮ್ಮ, ಶ್ವೇತಾ ಸೇರಿದಂತೆ ಕಾರ್ಯಕರ್ತರು ಇದ್ದರು.

# ನೌಕರರ ಕಲ್ಯಾಣ ಕಾರ್ಯಕ್ರಮಗಳಿಗೆ ಆದ್ಯತೆ

**ನೈಜ್ಯ ದೆಸೆ ನ್ಯೂಸ್**



**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಅಕಾಲಿಕ ಮರಣ ಹೊಂದಿದ ನೌಕರರಿಗೆ ತಲಾ 10 ಲಕ್ಷ ರೂ.ನಂತೆ ಒಟ್ಟು 23 ಜನರಿಗೆ 2.30 ಕೋಟಿ ರೂ. ವಿಮೆ ಪರಿಹಾರ ವಿತರಿಸಲಾಗಿದೆ. ಹೀಗಾಗಿ ನೌಕರರ ಕಲ್ಯಾಣ ಕಾರ್ಯಕ್ರಮಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಎಂ.ವೈ.ಪಾಟೀಲ್ ಹೇಳಿದರು.**

ನಿಗಮದ ಕೇಂದ್ರ ಕಚೇರಿಯಲ್ಲಿ ಸೋಮವಾರ ಫಲಾನುಭವಿಗಳಿಗೆ ವಿಮೆ ಪರಿಹಾರ ವಿತರಿಸಿದ ನಂತರ ಮಾತನಾಡಿದ ಅವರು, ಆರಂಭದಲ್ಲಿ ವಿಮೆ ಪರಿಹಾರ 3 ಲಕ್ಷ ರೂ.ನಿಗದಿಯಾಗಿತ್ತು. ಹಂತ, ಹಂತವಾಗಿ ಏರಿಕೆ ಮಾಡಿ ಇದೀಗ 12.50 ಲಕ್ಷ ರೂ.ಗೆ ಬಂದಿದೆ. ನೌಕರರ ವೇತನದಲ್ಲಿ ಪ್ರತಿ ತಿಂಗಳು 200 ರೂ. ಜತೆಗೆ ಸಂಸ್ಥೆ 210 ರೂ. ವಂತಿಗೆ ಭರಿಸುತ್ತಿದೆ. ಫೆಬ್ರವರಿಯಿಂದ ಈ ವಂತಿಗೆ ಹಣ ನೌಕರರ ಪಾಲು 300 ರೂ, ಸಂಸ್ಥೆ 210 ರೂ. ಭರಿಸಲಿದೆ ಎಂದು ವಿವರಿಸಿದರು.ನಿಗಮದ ವ್ಯಾಪ್ತಿಯಲ್ಲಿ ಬರುವ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯಪುರ ವ್ಯಾಪ್ತಿಯಲ್ಲಿ ಮೃತರಾದ ನೌಕರರ ಕುಟುಂಬಕ್ಕೆ ವಿಮೆ ಪರಿಹಾರ ದೊರೆಯಲಿದೆ. ಸಂಸ್ಥೆಯಲ್ಲಿ ಒಟ್ಟು 19400 ಜನ ನೌಕರರು ಸೇವೆ ಸಲ್ಲಿಸುತ್ತಿದ್ದಾರೆ. ತಿಂಗಳಿಗೆ ಸರಾಸರಿ 7&8 ಜನ ಮೃತರಾಗುತ್ತಿದ್ದಾರೆ.

ನೌಕರರು ಸಾವನ್ನಪ್ಪಿದ ಒಂದು ತಿಂಗಳೊಳಗೆ ವಿಮೆ ಪರಿಹಾರ ಮೊತ್ತ ವಿತರಿಸಲಾಗುತ್ತಿದೆ ಎಂದು ಹೇಳಿದರು.ನೌಕರರ ವೇತನ ಮಾಡುವ ಬ್ಯಾಂಕು ಪ್ರತಿ ನೌಕರರಿಗೆ 1 ಕೋಟಿ ರೂ. ಅಪಘಾತ ವಿಮೆ ಪರಿಹಾರ ನೀಡುತ್ತಿದ್ದು, ಸಾಮಾನ್ಯ ಸಾವಿಗೂ 5 ಲಕ್ಷ ರೂ.ವರೆಗೆ ಪರಿಹಾರ ನೀಡುತ್ತಿದೆ. ಸಂಸ್ಥೆಯ ಆಂತರಿಕ ವಿಮೆ ಪರಿಹಾರದ ಜತೆಗೆ ಬ್ಯಾಂಕು ನೀಡುವ ಹೆಚ್ಚುವರಿ ಪರಿಹಾರ ನೌಕರರ ಕುಟುಂಬಕ್ಕೆ ಹೆಚ್ಚಿನ ಅನುಕೂಲ ಕಲ್ಪಿಸಲಿದೆ ಎಂದು ತಿಳಿಸಿದರು.ನಿಗಮದ ಚಾಲಕರ ಮೇಲೆ ಆಗಾಗ ಹಲ್ಲೆ ನಡೆಯುತ್ತಿರುವುದು ಕಂಡುಬಂದಿದೆ. ಕೆಲವೆಡೆ ಹಲ್ಲೆ ನಡೆಸಿದವರ ಮೇಲೆ ಪ್ರಕರಣವನ್ನೂ ದಾಖಲಿಸಲಾಗಿದೆ. ಓವರ್ ಟೇಕ್ ಮಾಡಲು ಅವಕಾಶ ನೀಡಲಿಲ್ಲ ಎಂಬ ಕಾರಣಕ್ಕೆ ಸಂಸ್ಥೆಯ ಬಸ್ ಚಾಲಕರ ಮೇಲೆ ಹಲ್ಲೆ ನಡೆಸುವುದು ತರವಲ್ಲ. ಜನರಲ್ಲೂ ಜಾಗೃತಿ ಬರಬೇಕು.

ಪ್ರಯಾಣಿಕರನ್ನು ಸುರಕ್ಷಿತವಾಗಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಕರೆದೊಯ್ಯುವ ಜವಾಬ್ದಾರಿಯೊಂದಿಗೆ ಚಾಲಕರು ಕೆಲಸ ನಿರ್ವಹಿಸುತ್ತಾರೆ. ಹಲ್ಲೆಯಂತಹ ಟನೆಗಳು ನಡೆಯಬಾರದು. ಇಂತಹ ಪ್ರಕರಣಗಳು ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ವಿವರಿಸಿದರು.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ, ಕಾರ್ಮಿಕ ಕಲ್ಯಾಣಾಧಿಕಾರಿ ಚಂದ್ರಕಾಂತ ಫುಲೇಕರ್ ಇತರರಿದ್ದರು. 23 ಜನರಿಗೆ ಒಟ್ಟು 2.30 ಕೋಟಿ ರೂ. ವಿಮೆ ಪರಿಹಾರ ವಿತರಿಸಲಾಗಿದೆ. ಇತ್ತೀಚಿಗೆ ನಡೆದ ಮಂಡಳಿ ಸಭೆಯಲ್ಲಿ ತೀರ್ಮಾನಿಸಿದಂತೆ ಮುಂದಿನ ದಿನಗಳಲ್ಲಿ ವಿಮೆ ಪರಿಹಾರ ತಲಾ 12.50 ಲಕ್ಷ ರೂ. ಹೆಚ್ಚಿಸಲಾಗುತ್ತಿದೆ. ರಾಜ್ಯದ ಉಳಿದ ನಿಗಮಗಳಿಗಿಂತಲೂ ವಿಮೆ ಪರಿಹಾರ ನಮ್ಮ ಸಂಸ್ಥೆಯಲ್ಲಿ ಹೆಚ್ಚು ನೀಡಲಾಗುತ್ತಿದೆ.

## ನೇಮಕಾತಿ ಪ್ರಕಟಣೆ

ಆಧಾರ್ ಸೇವಾ ಕೇಂದ್ರ ನೇಮಕಾತಿ 2026 253 ಆಧಾರ್ ಮೇಲ್ವಿಚಾರಕ/ಆಪರೇಟರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಧಾರ್ ಸೇವಾ ಕೇಂದ್ರ ನೇಮಕಾತಿ 2026: 253 ಆಧಾರ್ ಮೇಲ್ವಿಚಾರಕ/ಆಪರೇಟರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಆಧಾರ್ ಸೇವಾ ಕೇಂದ್ರವು ಆಧಾರ್ ಮೇಲ್ವಿಚಾರಕ/ ಆಪರೇಟರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಆಧಾರ್ ಸೇವಾ ಕೇಂದ್ರವು ಫೆಬ್ರವರಿ 2026 ರ ಅಧಿಕೃತ ಅಧಿಸೂಚನೆಯ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 10–ಮಾರ್ಚ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 11–02–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 10–ಮಾರ್ಚ್–2026 ಅಧಿಕೃತ ವೆಬ್‌ಸೈಟ್: csc.gov.in

# ಸಾಧಕರನ್ನು ಗೌರವಿಸುವುದು ಸಮಾಜದ ಜವಾಬ್ದಾರಿ: ಶಾಸಕ ನಾಡಗೌಡ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಸಮಾಜದ ಹಿತಕ್ಕಾಗಿ ತಮ್ಮನ್ನು ಅರ್ಪಿಸಿಕೊಂಡು ಸೇವೆಯನ್ನು ಮಾಡುತ್ತಿರುವ ವಿವಿಧ ಕ್ಷೇತ್ರಗಳ ಸಾಧಕರನ್ನು ಗುರುತಿಸಿ ಗೌರವಿಸುವ ಕಾರ್ಯ ಸಮಾಜದಿಂದಾಗಬೇಕು ಎಂದು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡ ಹೇಳಿದರು.**

ಪಟ್ಟಣದ ಟಿಪ್ಪು ನಗರದ ಆವರಣದಲ್ಲಿ ಡಾ.ಎಪಿಜೆ ಅಬ್ದುಲ್ ಕಲಾಂ ಫೌಂಡೇಶನ್ ಇದರ 9 ನೇ ವಾರ್ಷಿಕೋತ್ಸವ ಅಂಗವಾಗಿ ಹಮ್ಮಿಕೊಂಡ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಈ ಫೌಂಡೇಶನ್ ದ ಪದಾಧಿಕಾರಿಗಳು ಮಾಡುವ ಕಾರ್ಯಗಳು ಶ್ಲಾಘನೀಯವಾಗಿವೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಇರಲಿ ಎಂದರು. ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರ್ಕಲ್ ಹಾಗೂ ಮುಸ್ಲಿಂ ಬ್ಯಾಂಕ್ ನಿರ್ದೇಶಕ ಇಬ್ರಾಹಿಂ ಮನ್ಸೂರ್ ಮಾತನಾಡಿ ಫೌಂಡೇಶನ್



ಅಧ್ಯಕ್ಷ ಶಫೀಕ ಇನಾಮದಾರ ಅವರು ಜಾತ್ಯತೀತವಾಗಿ ಎಲ್ಲ ಸಮುದಾಯದವರ ಜೊತೆ ಸೇರಿ ನಿಸ್ವಾರ್ಥ ಭಾವನೆಯಿಂದ ಕೆಲಸ ಮಾಡುತ್ತಿದ್ದಾರೆ ಅವರಿಗೆ ನಾವೆಲ್ಲರೂ ಸಹಕರಿಸೋಣ ಎಂದರು.

ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ ಸಮಾರಂಭದ ಸಾನಿಧ್ಯ ವಹಿಸಿದ್ದರು. ಫೌಂಡೇಶನ್ ಅಧ್ಯಕ್ಷ ಮೊಹಮ್ಮದ್ ಶಫೀಕ ಇನಾಮದಾರ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಕಾರ್ಯಕ್ರಮದಲ್ಲಿ ಮುಖಂಡ ಸಿದ್ದನಗೌಡ ಪಾಟೀಲ (ನಾವದಗಿ), ಸಂಗನಗೌಡ ಲಿಂಗದಳ್ಳಿ,ಸಂಗನಗೌಡ ಅಸ್ಕಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮಹಿಬೂಬ ಕೆಂಭಾವಿ, ನಿರ್ದೇಶಕ ಆದಮಸಾಬ ಅತ್ತಾರ, ಮಹೆಬೂಬ ಖಾದ್ರಿ,

ಮಹಲ್ ಗಲ್ಲಿ ಅಧ್ಯಕ್ಷ ಹಸನಸಾಬ ಕೊರ್ಕಿ, ಕೃಷಿ ಅಧಿಕಾರಿ ಮಹೇಶ ಜೋಶಿ,



ಅಬ್ದುಲ್ ರಜಾಕ್ ಮನಗೂಳಿ, ಶಾಸಕರ ಆಪ್ತ ಕಾರ್ಯದರ್ಶಿ ಬಾಗೇವಾಡಿ, ಪುರಸಭೆ ಮಾಜಿ ಅಧ್ಯಕ್ಷ ಎಂ.ಕೆ.ಚೋರಗಸ್ತಿ, ಮೋದಿನಸಾ ನಗಾರ್ಚಿ, ನಾಸೀರಹುಸೇನ ಇನಾಮದಾರ, ಮೌ.ಮೊಹಮ್ಮದ್ ಯೂಸುಫ್ ಡೋಣಿ, ಕಾರ್ಯದರ್ಶಿ ಪೀರಮಹಮದ್ ಖಾಜಿ, ಅಬ್ಬಾಸಲಿ ನೀರಲಗಿ,ಶೌಕತ್ ಲಾಹೋರಿ, ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಆಸೀಫ ಕೆಂಭಾವಿ, ಸಚೀನ ಎಚ್.ಪಾಟೀಲ, ಮಹಾಂತೇಶ ಮುರಾಳ, ಸೈಯದ್ ಇರ್ಫಾನ್ ಖಾಜಿ, ಮೊಹಮ್ಮದ್ ಅಶ್ಫಾಕ್ ನಮಾಜಕಟ್ಟಿ,ಜಾವೀದ ಕೆಂಭಾವಿ,ಗುಲಾಮ ಡೋಣಿ,ಯಾಸೀನ ಮಕಾಂದಾರ, ಹನೀಫ ಜಮಾದಾರ, ಫೌಂಡೇಶನ್ ಪದಾಧಿಕಾರಿಗಳು ಇದ್ದರು.

## ಅಂಗಾಂಗ ದಾನದ ಕುರಿತು ಜಾಗೃತಿ: ಸಚಿವ ಎಂ.ಬಿ.ಪಾಟೀಲ ವಾಗ್ದಾನ

ನೈಜ್ಯ ದೆಸೆ ನ್ಯೂಸ್

**ಸಾರ್ವಜನಿಕರಲ್ಲಿ ಅಂಗಾಂಗ ದಾನದ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನಾನೇ ಸ್ವತಃ ಅಂಗಾಂಗ ದಾನ ಮಾಡಲು ವಾಗ್ದಾನ ಮಾಡುತ್ತೇನೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದರು.ನಗರದಲ್ಲಿ ಇತ್ತೀಚೆಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೆದುಳು ನಿಷ್ಕ್ರಿಯಗೊಂಡ ಬಳಿಕ ಎರಡು ಕಣ್ಣು (ಕಾರ್ನಿಯಾ) ಮತ್ತು ಎರಡು ಕಿಡ್ನಿಗಳನ್ನು ದಾನ ಮಾಡಿದ ಬಲರಾಮ ಕೃಷ್ಣ ಬಾಗಲಕೋಟ ಕುಟುಂಬದ ಸದಸ್ಯರನ್ನು ಬಿಎಲ್‌ಡಿಇ ಸಂಸ್ಥೆಯಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಅವರು ಮಾತನಾಡಿದರು.**



ಅಂಗಾಂಗ ದಾನ ಮಾಡುವುದರಿಂದ ಸತ್ತ ಮೇಲೂ ಬದುಕುತ್ತೇವೆ. ಹತ್ತಾರು ಜನರಿಗೆ ಜೀವದಾನ ಮಾಡುತ್ತೇವೆ ಎಂಬ ಅರಿವು ಜನರಲ್ಲಿ ಮೂಡಬೇಕಾಗಿದೆ. ಈ ನಿಟ್ಟಿನಲ್ಲಿ ಅಂಗಾಂಗ ದಾನದ ಮಹತ್ವವನ್ನು ಜನ–ರಿಗೆ ತಿಳಿಸುವ ಉದ್ದೇಶದಿಂದ ಬಿಎಲ್‌ಡಿಇ ಸಂಸ್ಥೆಯಿಂದ ಅಭಿಯಾನ ಆರಂಭಿಸಲಾಗುವುದು' ಎಂದು ತಿಳಿಸಿದರು. 'ವಿಜಯಪುರ, ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿ ಮಿದುಳು ನಿಷ್ಕ್ರಿಯಗೊಂಡ ವ್ಯಕ್ತಿಯಿಂದ ಅಂಗಾಂಗ ದಾನ ಪಡೆದಿರುವುದು ಇದೇ ಮೊದಲ ಸಲವಾಗಿದೆ. ಬಿ.ಎಂ.ಪಾಟೀಲ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಮೊದಲ ಬಾರಿಗೆ ಮೆದುಳು ನಿಷ್ಕ್ರಿಯಗೊಂಡ ವ್ಯಕ್ತಿಯ ಅಂಗಾಂಗಗಳನ್ನು ಬೇರ್ಪಡಿಸಲಾಗಿದೆ. ನಮ್ಮ ಆಸ್ಪತ್ರೆಯ ವೈದ್ಯರ ತಂಡವನ್ನು ಅಭಿನಂದಿಸುತ್ತೇನೆ' ಎಂದು ಹೇಳಿದರು. 'ಬಲರಾಮ ಅವರ ಮಿದುಳು ನಿಷ್ಕ್ರಿಯವಾದ ಬಳಿಕ ಅವರ ಕುಟುಂಬದವರು ಅಂಗಾಂಗವನ್ನು ದಾನ ಮಾಡಿ ಇಬ್ಬರು ವ್ಯಕ್ತಿಗಳಿಗೆ ಜೀವದಾನ ಮಾಡಿದ್ದಾರೆ. ಈ ಮೂಲಕ ಅವರು ಇತರರಿಗೆ ಮಾದರಿಯಾಗುವ ಕೆಲಸ ಮಾಡಿದ್ದಾರೆ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಬಲರಾಮ ಕುಟುಂಬದವರಿಗೆ ಬಿಎಲ್‌ಡಿಇ ಸಂಸ್ಥೆಯಲ್ಲಿ ಶಿಕ್ಷಣ, ಉದ್ಯೋಗ ಒದಗಿಸುವುದಾಗಿ ಸಚಿವರು ಭರವಸೆ ನೀಡಿದರು. ಬಲರಾಮ ಅವರ ಸಹೋದರಿಯರಾದ ಶೃತಿ ಹಳ್ಳದಮನಿ, ರೂಪಾ, ಸಹೋದರ ಪರಶುರಾಮ ಬಾಗಲಕೋಟ, ಮಾವಂದಿಯರಾದ ಕಾಶಿನಾಥ, ಶವಣಕುಮಾರ ಅವರಿಗೆ ಕೃತಜ್ಞತೆ ಸಲ್ಲಿಸಿ, ಅವರಿಗೆ ಬಿಎಲ್‌ಡಿಇ ಆರೋಗ್ಯ ಕಾರ್ಡ್ ವಿತರಿಸಿದರು. ಯಾವಾವ ಅಂಗಾಂಗ ದಾನ: ಮೆದುಳು ನಿಷ್ಕ್ರಿಯಗೊಂಡ ವ್ಯಕ್ತಿಯ ದೇಹದಿಂದ ಹೃದಯ, ಶ್ವಾಸಕೋಶ(ಲಂಗ್ಸ್), ಲಿವರ್, ಕಿಡ್ನಿ, ಪ್ಯಾನ್‌ಕ್ರಿಯಾಸ್, ಕಣ್ಣುಗುಡ್ಡೆಗಳು, ಚರ್ಮ, ಎಲುಬುಗಳು, ಹೃದಯದ ವಾಲ್ವ್‌ಗಳು, ರಕ್ತನಾಳಗಳು, ಎಲ್ಲ ಕೋಶಗಳನ್ನು ದಾನ ಮಾಡಬಹುದಾಗಿದೆ. ಅವಕಾಶವಿದ್ದಾಗ ಜನರು ಅಂಗಾಂಗ ದಾನ ಮಾಡಲು ಮುಂದೆ ಬರಬೇಕು ಎಂದು ಮನವಿ ಮಾಡಿದರು. ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಪತಿ ಡಾ. ಅರುಣ ಇನಾಮದಾರ, ಬಿ. ಎಂ. ಪಾಟೀಲ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ವೈದ್ಯಕೀಯ ನಿರ್ದೇಶಕ ಡಾ.ವಿಜಯಕುಮಾರ ಕಲ್ಯಾಣಪ್ಪಗೋಳ, ಯುರಾಲಜಿ ವಿಭಾಗ ಮುಖ್ಯಸ್ಥ ಡಾ.ಎಸ್.ಬಿ.ಪಾಟೀಲ, ಪ್ರಾಚಾರ್ಯರಾದ ಡಾ. ತೇಜಶ್ವಿನಿ ವಲ್ಲಭ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ಕೇಂದ್ರ ತಂಡದ ಅಧಿಕಾರಿಗಳಿಂದ ನರೇಗಾ ಕಾಮಗಾರಿ ಪರಿಶೀಲನೆ







ನೈಜ್ಯ ದೆಸೆ ನ್ಯೂಸ್

**ರಾಯಚೂರು: ತಾಲ್ಲೂಕಿನ ಚಂದ್ರಬಂಡ ಹಾಗೂ ಬಾಯಿದೊಡ್ಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಾಮಗಾರಿಗಳನ್ನು ಕೇಂದ್ರ ಆಡಿಟ್ ತಂಡದ ಅಧಿಕಾರಿ ಕುಮುದ್ ದುಬೆ ಅವರು ಫೆ.16ರ ಸೋಮವಾರ ದಂದು ಭೇಟಿ ನೀಡಿ ಪರಿಶೀಲನೆ ಮಾಡಿದರು.**

**ಮೊದಲಿಗೆ ಚಂದ್ರಬಂಡ ಗ್ರಾಮ ಪಂಚಾಯತಿ ಕಚೇರಿಗೆ ಭೇಟಿ ನೀಡಿ ಕಾಮಗಾರಿ ಕಡತ, ನೋಂದಣಿ, ಎನ್.ಎಂ.ಎಂ.ಎಸ್. ಹಾಜರಾತಿಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪಡೆದುಕೊಂಡರು.**

ನಂತರ ಅರಿಸಿಗೇರಾ ತಾಂಡದಲ್ಲಿರುವ ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ನಾಗನದೊಡ್ಡ ಗ್ರಾಮದಲ್ಲಿರುವ ಸಾಮಾಜಿಕ ಅರಣ್ಯದಲ್ಲಿ ಕಂದಕ ಬದು ನಿರ್ಮಾಣ, ದನದ ಕೊಟ್ಟಿಗೆ ಹಾಗೂ ಚಿಂತಲ ಕುಂಟ ಅಮೃತ ಸರೋವರ ಕೆರೆ ಕಾಮಗಾರಿಗಳನ್ನು ವೀಕ್ಷಿಸಿದರು. ನಂತರ ಚಂದ್ರಬಂಡ ಗ್ರಾಮದಲ್ಲಿರುವ ಕೀರಾಕುಂಟ ಅಮೃತ ಸರೋವರ ಕೆರೆ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿದರು.

ನಂತರ ಬಾಯಿ ದೊಡ್ಡ ಗ್ರಾಮ ಪಂಚಾಯತಿಯ ಕಡಗಂದೊಡ್ಡಿ ಗ್ರಾಮದ ಮೆಟಲ್ ರಸ್ತೆ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಕುರಬದೊಡ್ಡಿ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕಾರ್ಮಿಕರ ಎನ್.ಎಂ.ಎಂ. ಎಸ್. ಹಾಜರಾತಿ, ಉದ್ಯೋಗ ಚೀಟಿ ಮತ್ತು ಕೆಲಸದ ಪ್ರಮಾಣವನ್ನು ಪರಿಶೀಲಿಸಿದರು.

ನಂತರ cgandrababda ಗ್ರಾಮ ಪಂಚಾಯತಿಯ ಕಟ್ಲಟ್ಕೂರು ಗ್ರಾಮದಲ್ಲಿ ಚರಂಡಿ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ನಿರ್ದೇಶಕರು ಹನುಮಂತ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಡಿಪಿಎಮ್, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಐಇಸಿ ಸಂಯೋಜಕರು ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

# ಭಾರತೀಯ ಸಂಸ್ಕೃತಿ ವಿಶ್ವದಲ್ಲಿಯೇ ಶ್ರೇಷ್ಠವಾಗಿದೆ

ನೈಜ್ಯ ದೆಸೆ ನ್ಯೂಸ್

**ಧರ್ಮವೆಂದರೆ ಎಂದರೆ ಪೂಜಾ ಪದ್ಧತಿಯಲ್ಲ. ಅದೊಂದು ಜೀವನ ಪದ್ಧತಿಯಾಗಿದ್ದು, ಸಂಸ್ಕಾರಯುತ, ಮಾನವೀಯ ಮೌಲ್ಯಗಳೊಂದಿಗೆ ಬದುಕುವುದಾಗಿದೆ. ಹೀಗಾಗಿಯೇ ಭಾರತೀಯ ಸಂಸ್ಕೃತಿ ವಿಶ್ವದಲ್ಲಿಯೇ ಶ್ರೇಷ್ಠವಾಗಿದೆ' ಎಂದು ತಿಮ್ಮಾಪೂರ ಕಲ್ಯಾಣ ಆಶ್ರಮದ ಮಹಾಂತಲಿಂಗ ಸ್ವಾಮೀಜಿ ಹೇಳಿದರು.**

ಸಮೀಪದ ಗೆಜ್ಜಲಗಟ್ಟಾ ಗ್ರಾಮದಲ್ಲಿ ಮಾನಪ್ಪ ವಜ್ಜಲ ಕುಟುಂಬದವರು ಹಮ್ಮಿಕೊಂಡಿದ್ದ ವೀರನಾಗಮ್ಮ ದೇವಸ್ಥಾನ ದೇವಾಲಯ ಲೋಕಾರ್ಪಣೆ ಹಾಗೂ ಮೂರ್ತಿ



ಪ್ರತಿಷ್ಠಾಪನೆ ಹಾಗೂ ಬ್ರಹ್ಮಕಲಶೋತ್ಸವ ಸಮಾರಂಭದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಭಾನುವಾರ ಸಂಜೆ ಮಾತನಾಡಿ, 'ನಮ್ಮ ಸಂಸ್ಕೃತಿ, ಅಚಾರ–ವಿಚಾರ ಅಳಿಸಲು ನಾವು ಎಂದಿಗೂ ಬಿಡಬಾರದು. ನಮ್ಮ ಧರ್ಮವನ್ನು ನಾವೇ ಕಾಪಾಡಿಕೊಳ್ಳಬೇಕು' ಎಂದು ಹೇಳಿದರು.

ಶಾಸಕ ಮಾನಪ್ಪ ವಜ್ಜಲ ಮಾತನಾಡಿ, 'ವೀರನಾಮ್ಮ ದೇವಸ್ಥಾನಕ್ಕೆ 500 ವರ್ಷಗಳ ಇತಿಹಾಸವಿದೆ. ಗೆಜ್ಜಲಗಟ್ಟಾ ಗ್ರಾಮದಲ್ಲಿ ನೆಲಿಸಿದ್ದು, ಈ ಭಾಗದ ಜನರ ಪುಣ್ಯ. ಬೇಡಿ ಬಂದ ಭಕ್ತರಿಗೆ ವರವ ನೀಡುವ ಗ್ರಾಮ ದೇವತೆಯ ದೇವಸ್ಥಾನ ಉದ್ಘಾಟನೆಗೆ ಸಿದ್ಧದ್ದವಾಗಿದೆ.

ನಮ್ಮ ಕುಟುಂಬವು, ವೀರನಾಗಮ್ಮ ದೇವಿಯ ಆಶೀರ್ವಾದದಿಂದ ಆರೋಗ್ಯ ಹಾಗೂ ಕ್ಷೇಮದಿಂದಿದೆ. ಗ್ರಾಮ ದೇವತೆಯ ಆಶೀರ್ವಾದಿಂದ ಮಳೆ–ಬೆಳೆ ಸಮೃದ್ಧವಾಗಿರಲಿದೆ' ಎಂದು ಹೇಳಿದರು. ಆಳಂದ ಮಹಾಂತಲಿಂಗ ಶಿವಾಚಾರ್ಯರು, ರಾಯಚೂರು ಶಾಸಕ ಶಿವರಾಜ ಪಾಟೀಲ, ಮಸ್ಕಿಯ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ, ಬಸವಂತರಾಯ ಕುರಿ ಮಾತನಾಡಿದರು. ನಂತರ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಲಾ ತಂಡಗಳಿಂದ ನೃತ್ಯ ಸಂಸ್ಕೃತಿ ಕಾರ್ಯಕ್ರಮಗಳು ಜರುಗಿದವು. ಅಕಲಿಮಠದ ಬ್ರಹ್ಮಶ್ರೀ ವೀರಭದ್ರ ಸ್ವಾಮೀಜಿ, ದೊಡ್ಡಬಸವ ತಾತಾನವರು, ಶರಣಯ್ಯ ತಾತಾನವರು, ರಾಜಾ ಶ್ರೀನಿವಾಸನಾಯಕ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಈಶ್ವರ ವಜ್ಜಲ, ಪರಮೇಶ ಯಾದವ, ಗುಂಡಪ್ಪಗೌಡ ಮಾಸ್ತರ್, ಶಂಕರಗೌಡ, ಹಟ್ಟಿ ಠಾಣೆಯ ಪಿಐ ಶಿವಾನಂದ, ವಿವಿಧ ಗ್ರಾಮಗಳ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಅಂಬಿಗರ ಚೌಡಯ್ಯ ಸಮಾಜದ ಅಧ್ಯಕ್ಷ ತಂಗಡಗಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಜರುಗಿದ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಅನಾವರಣ, ನೂತನ ಸಭಾಭವನ ಉದ್ಘಾಟನೆ ಹಾಗೂ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಅನುಭವ ಮಂಟಪ ಶಂಕುಸ್ಥಾಪನೆ ಅಂಗವಾಗಿ ಹಮ್ಮಿಕೊಂಡ ಧರ್ಮಸಭೆಯಲ್ಲಿ ಶ್ರೀ ನಿಜ ಶರಣ ಅಂಬಿಗರ ಚೌಡಯ್ಯ**



**ಸಮಾಜದ ತಾಲೂಕ ಅಧ್ಯಕ್ಷ ಪರಶುರಾಮ ಬಿ.ತಂಗಡಗಿ ಹಾಗೂ ರಮೇಶ ಮೂಕಿಹಾಳ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.**

ಪೂಜ್ಯ ಶ್ರೀ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು, ಶಿವಕುಮಾರ ನಾಟೀಕಾರ, ಶಿವಾಜಿ ಮೆಟಗಾರ, ಅಮರೇಶಣ್ಣ ಕಾಮನಕೇರಿ ಹಾಗೂ ಅಂಬಿಗರ ಚೌಡಯ್ಯ ಸಮಾಜದ ಗಣ್ಯರು ಹಿರಿಯರು ಉಪಸ್ಥಿತರಿದ್ದರು.

# ಮಹಿಳೆಯರ, ಮಕ್ಕಳ ಸಾಗಣೆ ತಡೆಗೆ ಮುಂದಾಗಿ: ನ್ಯಾ.ಹೆಚ್.ಎ.ಸಾತ್ವಿಕ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮಹಿಳೆಯರ ಮತ್ತು ಮಕ್ಕಳನ್ನು ಸಾಗಣೆ ಮಾಡುವ ಅನೈತಿಕ ಚಟುವಟಿಕೆಯನ್ನು ತೊಲಗಿಸುವ ಕಾರ್ಯಕ್ಕೆ ಸಾರ್ವಜನಿಕರು ಸಹಕ–ರಿಸಬೇಕ. ಆಗ ಮಾತ್ರ ಅಮಾನವೀಯ ಕೃತ್ಯ ನಿಯಂತ್ರಿಸಲು ಸಾಧ್ಯ ಎಂದು ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ನ್ಯಾ.ಹೆಚ್.ಎ.ಸಾತ್ವಿಕ್ ಅವರು ಹೇಳಿದರು.**

ಫೆ.17ರ ಮಂಗಳವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೊದಲನೆ ಮಹಡಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿವಿಧ



ಭಾಗೀಧಾರ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ಹಾಗೂ ಐಟಿಪಿಎ–1956ರ ಕಾಯ್ದೆಯ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಒಂದು ದಿನದ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಾನವ ಕಳ್ಳ ಸಾಗಾಣೆಯಂತಹ ದುಷ್ಕೃತ್ಯ ಸಮಾಜಕ್ಕೆ ಮಾರಕವಾಗಿದೆ. ಜತೆಗೆ ಮೂಲ ಹಕ್ಕುಗಳ ಉಲ್ಲಂಘನೆ ಕುರಿತು ಅನೇಕ ದೂರುಗಳು ದಾಖಲಾಗುತ್ತಿವೆ.

ಆದ್ದರಿಂದ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಜವಾಬ್ದಾರಿ ಅರಿತು ಸಾರ್ವಜನಿಕರು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಇದಕ್ಕೂ ಮೊದಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಸಮಾಜದಲ್ಲಿ ನಡೆಯುವಂಥ ಕಾನೂನು ಬಾಹಿರ ಘಟನೆಗಳಿಗೆ ಮೌನವಹಿಸಿದರೆ, ಪರೋಕ್ಷವಾಗಿ ಅಪರಾಧಿಗಳಾದಂತೆ. ಆದ್ದರಿಂದ ಕಣ್ಣ ಮುಂದೆ ದುಷ್ಕೃತ್ಯಗಳು ನಡೆದಾಗ ಅದನ್ನು ತಪ್ಪಿಸಬೇಕಾದ್ದು, ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಹಿಳೆಯರ ಅಭಿವೃದ್ಧಿಗಾಗಿ ಸರ್ಕಾರ ಜಾರಿ ತಂದಿರುವ ಯೋಜನೆಗಳ ಸದುಪಯೋಗವಾಗುವಂತೆ ಮಾಡಿ, ಸಮಾಜದ ಬದಲಾವಣೆಗೆ ಶ್ರಮಿಸಬೇಕು ಎಂದರು.

ಪ್ರತಿಜ್ಞಾವಿಧಿ ಬೋಧನೆ: ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಕರ್ನಾಟಕವನ್ನು ಮಾನವ ಕಳ್ಳ ಸಾಗಾಣಿಕೆಯಿಂದ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಜನರನ್ನು ರಕ್ಷಿಸಲು ಹಾಗೂ ಸಾಗಾಣಿಕೆಗೆ ಒಳಪಟ್ಟವರಿಗೆ ಸೂಕ್ತ ನ್ಯಾಯ ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ, ಸಂವಿಧಾನದಲ್ಲಿ ನೀಡಿರುವ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ.ಕುಮಾರಸ್ವಾಮಿ ಅವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂ, ಕಾರ್ಮಿಕ ಇಲಾಖೆ ಅಧಿಕಾರಿ ಆರತಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಕುಮಾರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಮೈಬೂಬ್ ಸಾಬ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಇದ್ದರು. ಮಹಿಳಾ ಮತ್ತು ಮಕ್ಕಳ ಇಲಾಖೆಯ ತಜ್ಞರಾದ ಗಿರಿ–ಜವ್ವ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### BVSc

BVSc ಜಾನುವಾರು ಉತ್ಪಾದನೆ ಮತ್ತು ನಿರ್ವಹಣೆಯು 4 ವರ್ಷಗಳ ಕೋರ್ಸ್ ಆಗಿದ್ದು, ಇದು ಅತ್ಯುನ್ನತ ಪರಿಣತಿಯ ಮಟ್ಟಿಗೆ ಜಾನುವಾರು ಉತ್ಪಾದನೆಯಲ್ಲಿ ವಿಶೇಷ ತರಬೇತಿಯನ್ನು ನೀಡುತ್ತದೆ. ಇದು ಕೋಳಿ ಮತ್ತು ಇತರ ಪ್ರಾಣಿ ಸಾಕಣೆ ಮತ್ತು ಪ್ರಾಣಿ ಉತ್ಪಾದನೆಯ ಕ್ಷೇತ್ರದಲ್ಲಿ ಪರಿಸರ ಮತ್ತು ಉತ್ಪಾದನಾ ನಿರ್ವಹಣೆಗೆ ಒತ್ತು ನೀಡುವ ವಿವಿಧ ಪ್ರಗತಿಗಳನ್ನು ಅಧ್ಯಯನ ಮಾಡುತ್ತದೆ. ಈ ಕೋರ್ಸ್‌ಗೆ ಅರ್ಹತಾ ಮಾನದಂಡವು 10+2, ಮಧ್ಯಂತರ ಉತ್ತೀರ್ಣವಾಗಿದೆ. BVSc ಜಾನುವಾರು ಉತ್ಪಾದನೆ ಮತ್ತು ನಿರ್ವಹಣಾ ಕೋರ್ಸ್‌ಗೆ ಪ್ರವೇಶವು ಅರ್ಹತೆ ಅಥವಾ ಪ್ರವೇಶ ಪರೀಕ್ಷೆಗಳನ್ನು ಆಧರಿಸಿದೆ. BVSc ಜಾನುವಾರು ಉತ್ಪಾದನೆ ಮತ್ತು ನಿರ್ವಹಣೆ: ಅರ್ಹತೆ ಅಭ್ಯರ್ಥಿಗಳು ವಿಜ್ಞಾನ ವಿಭಾಗದಲ್ಲಿ ಮಧ್ಯಂತರ ಮಟ್ಟದಲ್ಲಿ 55% ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿರಬೇಕು. ಅಭ್ಯರ್ಥಿಗಳು ಮಧ್ಯಂತರ ಮಟ್ಟದಲ್ಲಿ ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ, ಜೀವಶಾಸ್ತ್ರ ಇತ್ಯಾದಿಗಳನ್ನು ಹೊಂದಿರಬೇಕು ಪಶು ಸಂವರ್ಧನೆ ಮತ್ತು ನಿರ್ವಹಣೆ (Livestock Production & Management). ಕೋಳಿ ಸಾಕಣೆ (Poultry Science). ದನಕರುಗಳ ತಳಿ ಮತ್ತು ಪೋಷಣೆ (Animal Breeding & Nutrition). ಪಶು ಆರೋಗ್ಯ ಮತ್ತು ರೋಗ ನಿಯಂತ್ರಣ (Animal Health & Diseases). ವೃತ್ತಿ ಅವಕಾಶಗಳು (Career Options): ಸರ್ಕಾರಿ ಪಶುವೈದ್ಯಕೀಯ ಆಸ್ಪತ್ರೆಗಳು (Veterinary Officer). ಡೈರಿ ಮತ್ತು ಪೌಲ್ಟ್ರಿ ಫಾರ್ಮ್ ನಿರ್ವಾಹಕರು. ಪ್ರಾಣಿ ಆಹಾರ ಕಂಪನಿಗಳು (Feed Industry). ಸಂಶೋಧನಾ ಸಂಸ್ಥೆಗಳು (Research Institutes).

1ನೇ ಪುಟದಿಂದ....

ಪತ್ರವನ್ನು ತೋರಿಸಿದರೆ ಉಚಿತ ಪ್ರಯಾಣದ ಸೌಲಭ್ಯವಿದೆ ಎಂದು ಸಚಿವರು ತಿಳಿಸಿದರು. ಇನ್‌ಸ್ಟ್ರಾಗ್ರಾಂ, ಫೇಸ್‌ಬುಕ್, ವಾಟ್ಸಾಪ್, ಟೆಲಿಗ್ರಾಂ, ಯೂಟ್ಯೂಬ್ ಸೇರಿದಂತೆ ಇತರ ಸಾಮಾಜಿಕ ಜಾಲತಾಣಗಳಲ್ಲಿ ನಕಲಿ ಪ್ರಶ್ನೆ ಪತ್ರಿಕೆಗಳನ್ನು ಹ–ರಿಬಿಡುವವರ ವಿರುದ್ಧ ಬಿಎನ್‌ಎಸ್ ಮತ್ತು ಶಿಕ್ಷಣ ಕಾಯ್ದೆಯಡಿ ಕಠಿಣ ಕ್ರಮ ಜರುಗಿಸಲಾಗುತ್ತದೆ ಹಾಗೂ ಸಂಬಂಧಿಸಿದವರ ಖಾತೆಗಳನ್ನು ನಿರ್ಬಂಧಿಸುವುದಾಗಿ ಎಚ್ಚರಿಕೆ ನೀಡಿದರು. ಈಗಾಗಲೇ ಮಾದರಿ ಪಶ್ನೆ ಪತ್ರಿಕೆಯನ್ನು ನೀಡುವ ಮೂಲಕ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಸಂಭವನೀಯ ಪ್ರಶ್ನೆಗಳ ಕುರಿತು ಶಾಲೆಗಳಲ್ಲಿ ಅಧ್ಯಯನಗಳಾಗಿವೆ. ಮಾದರಿ ಉತ್ತರಪತ್ರಿಕೆಗಳನ್ನು ಕೂಡ ಒದಗಿಸಲಾಗಿದೆ. ರಾಜ್ಯ ಮಟ್ಟದಲ್ಲಿ ಪೂರ್ವ ಸಿದ್ದತಾ ಸಭೆಗಳನ್ನು ನಡೆಸಲಾಗಿದೆ. ಖಾಸಗಿ ಮತ್ತು ಪುನರಾವರ್ತಿತ ಅಭ್ಯರ್ಥಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಪರೀಕ್ಷಾ ಕೇಂದ್ರದ 200 ಮೀಟರ್ ಸುತ್ತಳತೆಯಲ್ಲಿ ನಿಷೇಧಿತ ಪ್ರದೇಶ ಎಂದು ಘೋಷಿಸಲಾಗುವುದು. ಜೆರಾಕ್?ಸ, ಸೈಬರ್, ಕಂಪ್ಯೂಟ–ರ್ ಕೇಂದ್ರಗಳನ್ನು ಮುಚ್ಚಿಸಲಾಗುವುದು ಎಂದರು. ಸ್ಯಾಟ್ ಪದ್ಧತಿಯಿಂದಾಗಿ ಒಂದಿಷ್ಟು ಗೊಂದಲಗಳಾಗಿ ವಿದ್ಯಾರ್ಥಿಗಳು ಅವಕಾಶ ವಂಚಿತರಾಗಿರಬಹುದು. ಈ ಹಂತದಲ್ಲಿ ನಾವು ಏನೂ ಮಾಡಲಾಗುವುದಿಲ್ಲ. ಮುಂದಿನ ವರ್ಷದಿಂದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಬಯೋಮೆಟ್ರಿಕ್ ಹಾಗೂ ಮುಖ ಚಹರೆ ಗುರುತಿಸುವ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸಲಾಗುತ್ತದೆ. ಅನುದಾನ ರಹಿತ ಶಾಲೆಗಳಿಗೆ ಪಾಲಿಸಬೇಕಾದ ಕ್ರಮಗಳ ಬಗ್ಗೆ ಅಧಿವೇಶನದ ಬಳಿಕ ಪರಿಶೀಲನೆ ನಡೆಸವುದಾಗಿ ಹೇಳಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕಳ್ಳತನವಾಗಿದ್ದ 27 ಮೋಟಾರ್ ಸೈಕಲ್‌ಗಳು ವಶ

ನೈಜ್ಯ ದೆಸೆ ನ್ಯೂಸ್

**ಮೋಟಾರ್ ಸೈಕಲ್ ಕಳ್ಳತನದ ಜಾಲ ಬೆನ್ನತ್ತಿದ ಹುನಗುಂದ ಪೊಲೀಸರು ಕಳ್ಳತನವಾಗಿದ್ದ 27 ಮೋಟಾರ್ ಸೈಕಲ್‌ಗಳನ್ನು ವಶಕ್ಕೆ ಪಡೆದುಕೊಂಡು ಇದರಲ್ಲಿ ಭಾಗಿಯಾದ ಮೂವರ ವಿರುದ್ಧ ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.**

ಹುನಗುಂದ ಪೊಲೀಸ್ ಠಾಣೆಯಲ್ಲಿ ಸೋಮವಾರ ಈ ಕುರಿತು ಸುದ್ದಿಗೋಷ್ಠಿ ನಡೆಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಬೈಕ್ ಕಳೆದುಕೊಂಡಿದ್ದ ತಾಲ್ಲೂಕಿನ ಹಡಗಲಿ ಗ್ರಾಮದ ಸಂಗಪ್ಪ ಬಸಪ್ಪ ಅಂಗಡಿ ನೀಡಿದ ದೂರಿನ ಮೇರೆಗೆ ಹುನಗುಂದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ–ತ್ತು.ಎಸ್ಪಿ ಸಿದ್ದಾರ್ಥ ಗೋಯಲ್, ಡಿವೈ–ಎಸ್ಪಿ. ಸಂತೋಷ ಬನ್ನಟ್ಟಿ, ಸಿಪಿಐ. ಎಸ್.ಬಿ. ಆಜೂರ ಮಾರ್ಗದರ್ಶನದಲ್ಲಿ ಪಿಎಸ್‌ಐ. ಎಸ್.ಜಿ. ಆಲದಕಟ್ಟಿ ನೇತೃತ್ವದ ತಂಡ ಈ ಕುರಿತು ತನಿಖೆ ಕೈಗೊಂಡಿತ್ತು ಎಂದರು.

ಬೈಕ್ ಕಳ್ಳತನ ಪ್ರಕರಣದಲ್ಲಿ ಅಮೀನಗಡ ಪೊಲೀಸ್‌ರಿಂದ ಬಂಧಿತನಾಗಿ ನ್ಯಾಯಾಂಗ ಬಂಧನದಲ್ಲಿದ್ದ ಯಾದಗಿರಿ



ಜಿಲ್ಲೆ ಸುರಪೂರ ತಾಲ್ಲೂಕಿನ ಸತ್ಯಂಪೇಟೆ ಗ್ರಾಮದ ಹುಲಗಪ್ಪ ಹನಮಂತ ಮೋಡಕೇರ (22) ಈತನನ್ನ ಪಿಸಿ. ಕಸ್ಟಡಿ ಮೇಲೆ ವಶಕ್ಕೆ ಪಡೆದು ವಿಚಾರಣೆ ಕೈಗೊಂಡ ಸಂದರ್ಭದಲ್ಲಿ ನೀಡಿದ ಮಾಹಿತಿ ಮೇರೆಗೆ ರಾಯಚೂರು ಜಿಲ್ಲೆ ದೇವದುರ್ಗ ಮೂಲದ ಹಣಮಂತ ರಾಮಣ್ಣ ಮೋಡಕೇರ (22) ಹಾಗೂ ಆಂಜನೇಯ ಹಣಮಂತರಾಯ ಗಾಲಿ (30) ಇವರನ್ನು ಬಂಧಿಸಲಾಗಿದೆ ಎಂದು ಹೇಳಿದರು.

ಬಂಧಿತ ಆರೋಪಿತರಿಂದ ಒಟ್ಟು 27 ಮೊಟಾರ್ ಸೈಕಲ್ ಬೈಕ್‌ಗಳನ್ನು ವಶಪಡಿಸಿಕೊಂಡಿದ್ದು, ಇವುಗಳ ಕಿಮ್ಮತ್ತು ಸುಮಾರು ? 16 ಲಕ್ಷ ಆಗಬಹುದೆಂದು ಹೇಳಿದ ಗೋಯಲ್, ಅಮೀನಗಡ ಠಾಣೆಯಲ್ಲಿ 30, ಇಳಕಲ್ ಠಾಣೆಯಲ್ಲಿ 5, ಹುನಗುಂದ ಠಾಣೆಯಲ್ಲಿ 27 ಸೇರಿ ಒಟ್ಟು 62 ಬೈಕ್ ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ವಶ ಪಡಿಸಿಕೊಂಡ ಬೈಕ್‌ಗಳು ರಾಜ್ಯವಲ್ಲದೇ ಹೊರ ರಾಜ್ಯಕ್ಕೂ ಸೇರಿದ್ದಾಗಿವೆ.

ಇದು ವರ್ಷದ ದೊಡ್ಡ ಪ್ರಕರಣ ಎಂದು ಹೇಳಿದರು. ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪ್ರಕರಣ ಭೇದಿಸುವಲ್ಲಿ ಶ್ರಮಿಸಿದ ಸಿಪಿಐ. ಎಸ್.ಬಿ. ಆಜೂರ, ಪಿಎಸ್‌ಐ.ಗಳಾದ ಎಸ್.ಜಿ. ಆಲದಕಟ್ಟಿ ಹಾಗೂ ಎನ್.ಎಸ್. ಸಿಮಾನಿ, ಸಿಬ್ಬಂದಿಗಳಾದ ಎಸ್.ಬಿ. ಅಮಲಿಹಾಳ, ಆಯ್.ಎಸ್. ಮಂಟ್ಯಾಳ, ಕೆ.ವಾಯ್. ವಾಲಿಕಾರ, ಎಂ.ಎಸ್. ನಾರಗಲ್ಲ, ಸಿದ್ದಪ್ಪ ಕೌಲಗಿ, ಬಿ.ಎನ್. ಗೌಡರ, ಎ.ಬಿ. ಯರದಾಳ, ಯಲ್ಲಪ್ಪ ಅಂಬಿಗೇರ, ಗಣೇಶ ಪವಾರ, ಆನಂದ ಗೋಲಪ್ಪನವರ, ಚಂದ್ರು ಜಟ್ಟೆಪ್ಪಗೋಳ, ಬಸವರಾಜ ಜಗಲಿ ಇವರ ಕಾರ್ಯವನ್ನು ಎಸ್ಪಿ ಸಿದ್ದಾರ್ಥ ಶ್ಲಾಘಿಸಿದರು. ಡಿವೈಎಸ್ಪಿ. ಸಂತೋಷ ಬನ್ನಟ್ಟಿ, ಸಿಪಿಐ. ಎಸ್.ಬಿ. ಆಜೂರ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಹುನಗುಂದದ ಪೊಲೀಸ್ ಠಾಣೆಯಲ್ಲಿ ಕಳ್ಳತನವಾದ 27 ಪೊಲಿಸರು ಬೈಕ್ ವಶಪಡಿಸಿಕೊಂಡಿರುವುದು. ಎಸ್ಪಿ ಸಿದ್ದಾರ್ಥ ಗೋಯಲ್ ಡಿವೈ–ಎಸ್ಪಿ ಸಂತೋಷ ಬನ್ನಟ್ಟಿ ಹುನಗುಂದ ಸಿಪಿಐ ಎಸ್.ಬಿ.ಆಜೂರ ಇದ್ದರು.

# ಮೋರೆರ ಶಿಲಾ ಸಮಾಧಿಗಳ ರಕ್ಷಣೆ, ಅಭಿವೃದ್ಧಿಗೆ ಕ್ರಮ: ಕೆ.ಪಿ.ಮೋಹನ್

ನೈಜ್ಯ ದೆಸೆ ನ್ಯೂಸ್

**ಹಿರೇಬೆಣಕಲ್ ಗ್ರಾಮದ ಮೋರೆರ್ ಶಿಲಾ ಸಮಾಧಿಗಳ ಮನೆಗಳ ಸಂರಕ್ಷಣೆಗೆ ಹೆಚ್ಚಿನ ಆದ–'ತೆ ನೀಡಿ ಅಗತ್ಯ ಸೌಲಭ್ಯ ಕಲ್ಪಿಸಲಾಗುತ್ತದೆ' ಎಂದು ವಸತಿ ಇಲಾಖೆ ಕಾರ್ಯದರ್ಶಿ ಹಾಗೂ ಜಿಪಂ ಆಡಳಿತಾಧಿಕಾರಿ ಕೆ.ಪಿ.ಮೋಹನ್ ರಾಜ್ ಹೇಳಿದರು.ತಾಲ್ಲೂಕಿನ ಹಿರೇಬೆಣಕಲ್ ಗ್ರಾಮದ ಮೋರೆರ್ ಬೆಟ್ಟಕ್ಕೆ ಭಾನುವಾರ ಭೇಟಿ ನೀಡಿ ಶಿಲಾ ಸಮಾಧಿಗಳನ್ನು ವೀಕ್ಷಿಸಿ ನಂತರ ಮಾತನಾಡಿದರು.**

3 ಸಾವಿರ ವರ್ಷಗಳ ಇತಿಹಾಸವಿರುವ ಮೋರೆರ್ ಬೆಟ್ಟದಲ್ಲಿ 3 ಸಾವಿರ ಶಿಲಾ ಸಮಾಧಿಗಳಿದ್ದು, ಕ್ರಮೇಣ ಅಳಿವಾಗಿ 300 ರಿಂದ 400ಕ್ಕೆ ತಲುಪಿರಬಹುದು. ಹಾಗಾಗಿ ಸರ್ವೇಕ್ಷಣಾ ಇಲಾಖೆ ಬೆಟ್ಟದಲ್ಲಿನ 8 ವಿಧದ





ಶಿಲಾ ಸಮಾಧಿಗಳ ಸರ್ವೇ ನಡೆಸಿ, ಸಂಖ್ಯೆ, ಅವುಗಳ ಗುಣಮಟ್ಟದ ಜೊತೆಗೆ ದುರಸ್ತಿ ಕೈ ಗೊಳ್ಳಬೇಕಾದ ಶಿಲಾಸಮಾಧಿಗಳ ಬಗ್ಗೆ ವರದಿ ನೀಡುವಂತೆ ತಿಳಿಸಲಾಗಿದೆ' ಎಂದರು. 'ಶಿಲಾ ಸಮಾಧಿಗಳ ಸಂರಕ್ಷಣೆಗೆ ಅರಣ್ಯ ಇಲಾಖೆ ಆಯಂಟಿ ಪೌಚಿಂಗ್ ಕ್ಯಾಂಪ್ ಹಾಕಿ ಸೋಲಾರ್ ಲೈಟ್, ಸಿಸಿಟಿವಿ ಕ್ಯಾಮರಾ ಅಳವಡಿಸಬೇಕು. ಶಿಲಾಸಮಾಧಿಗಳ 1 ಕಿ.ಮೀ. ಸುತ್ತು ತಂತಿ ಬೇಲಿ ಹಾಕಿ ರಕ್ಷಿಸಿ, ಹಿರೇಬೆಣಕಲ್ ಗ್ರಾಮದಿಂದ ಬೆಟ್ಟಕ್ಕೆ ಬರುವ ರಸ್ತೆ ಬಗ್ಗೆ ಮಾಹಿತಿ ಪಡೆಯಲು ಅಧಿಕಾ–ರಿಗಳಿಗೆ ಸೂಚಿಸಲಾಗಿದೆ. ಮೋರೆರ ಬೆಟ್ಟದ ಅಭಿವೃದ್ಧಿ, ಪ್ರವಾಸಿಗರಿಗೆ ಸೌಲಭ್ಯ ಕಲ್ಪಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗುತ್ತದೆ' ಎಂದರು.

ಇತಿಹಾಸ ತಜ್ಞ ಮಂಜುನಾಥ ದೊಡ್ಡಮನಿ ಅವರು ಬೆಟ್ಟಕ್ಕೆ ದಾರಿ ವ್ಯವಸ್ಥೆ, ಹಿರೇಬೆಣಕಲ್‌ನಲ್ಲಿರುವ ನಿರ್ಮಿತಿ ಕೇಂದ್ರವನ್ನು ಮ್ಯೂಸಿಯಂ ಮಾಡುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಸಿದರು. ಮೌನ ಧ್ಯಾನ ವ್ರತ ಸ್ಥಳಕ್ಕೆ ಭೇಟಿ: ಹಿರೇಬೆಣ–ಕಲ್ ಮೋರೆರ ಶಿಲಾಸಮಾಧಿಗಳ ಸಂರಕ್ಷಣೆಗೆ ಒತ್ತಾಯಿಸಿ ಪರಿಸರ ಸೇವಾ ಟ್ರಸ್ಟ್ ಅಧ್ಯಕ್ಷ ಮಂಜುನಾಥ ಗುಡ್ಲಾನೂರು ಫೆ.13 ರಿಂದ ಫೆ.15ರವರೆಗೆ ಮೌನ ಧ್ಯಾನ ವ್ರತ ಕೈಗೊಂಡಿದ್ದರು. ಈ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ಜಿಪಂ ಸಿಇಒ ವರ್ಣಿತ್ ನೇಗಿ ಭೇಟಿ ನೀಡಿ, ಮೋರೆರ ಬೆಟ್ಟದ ಅಭಿವೃದ್ಧಿ ಮಾಡುವುದಾಗಿ ಭರವಸೆ ನೀಡಿದರು.

ತಾಪಂ ಇಒ ರಾಮರೆಡ್ಡಿ ಪಾಟೀಲ, ಪುರಾತತ್ವ ಸರ್ವೇಕ್ಷಣಾ ಇಲಾಖೆ ಸಂರಕ್ಷಣಾ ಸಹಾಯಕ ರವೀಂದ್ರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ನಾಗರಾಜ, ಅರಣ್ಯ ಇಲಾಖೆ ಆರ್‌ಎಫ್‌ಒ ಬಸವರಾಜ ಪೂಜಾರ, ಕೊಪ್ಪಳ ತಾಪಂ ಸಹಾಯಕ ನಿರ್ದೇಶಕ ಮಹೇಶ, ಪಿಡಿಒ ಇಂದಿರಾ, ನರೇಗಾ ವಿಭಾಗದ ಜಿಲ್ಲಾ ಲೆಕ್ಕ ವ್ಯವಸ್ಥಾಪಕ ಪಂಪನಗೌಡ, ಸ್ಥಳೀಯರಾದ ವೀರೇಶ ಅಂಗಡಿ, ಬಸನಗೌಡ ಹೊಸಳ್ಳಿ, ಈಶಪ್ಪ ಕುಂಬಾರ, ಚಂದ್ರಶೇಖರ ಕುಂಬಾರ್ ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಯಿಂದ ಮಾತ್ರ ಪ್ರತಿಯೊಂದು ಮನೆಯಲ್ಲೂ ನೆಮ್ಮದಿ ವಾತಾವರಣ ನಿರ್ಮಾಣ

ನೈಜ್ಯ ದೆಸೆ ನ್ಯೂಸ್

**ರಾಜ್ಯದ ಪ್ರತಿಯೊಂದು ಮನೆಯಲ್ಲೂ ನೆಮ್ಮದಿ ವಾತಾವರಣ ನಿರ್ಮಾಣವಾಗಿದ್ದರೆ ಅದು ಗ್ಯಾರಂಟಿ ಯೋಜನೆಯಿಂದ ಮಾತ್ರ ಎಂದು" ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್. ತಂಗಡಗಿ ಹೇಳಿದರು.**

ಕೊಪ್ಪಳ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತಿ ಸಂಯುಕ್ತಾಶ್ರಯದಲ್ಲಿ ಕೊಪ್ಪಳ ನಗರದ ಮಧುಶ್ರೀ ಗಾರ್ಡನ್‌ನಲ್ಲಿ ಆಯೋಜಿಸಿದ್ದ ಕೊಪ್ಪಳ ಜಿಲ್ಲಾ ಗ್ಯಾರಂಟಿ ಕಾರ್ಯಾಗಾರ ಉತ್ಸವವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು. "ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ನಮ್ಮ ಸರ್ಕಾರ ನೀಡಿರುವ ಗ್ಯಾರಂಟಿ ಯೋಜನೆಯನ್ನು ಬಿಜೆಪಿಯವರಿಗೆ ತಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಯೋಜನೆ ಹೀಗೆ ಮುಂದುವರೆದರೆ ರಾಜ್ಯದಲ್ಲಿ ಅವ–ರಿಗೆ ಭವಿಷ್ಯವಿಲ್ಲ ಎಂದು ಗೊತ್ತು. ಹೀಗಾಗಿ



ಗ್ಯಾರಂಟಿ ಯೋಜನೆಯಿಂದ ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದಾರೆ" ಎಂದರು.

"ತಾವು ಪಡೆಯುತ್ತಿರುವ 5 ಗ್ಯಾರಂಟಿ ಯೋಜನೆಗಳ ಬಗ್ಗೆ ನಿಮ್ಮ ಮನೆ ಬಾಗಿಲಿಗೆ ಬರುವ ಬಿಜೆಪಿಗರಿಗೆ, ನೀವು ಮೂರೂವರೆ ವರ್ಷ ಅಧಿಕಾರದಲ್ಲಿದ್ದೀರಿ ಯಾವ ಯೋಜನೆಯನ್ನು ಕೊಟ್ಟಿದ್ದೀರಾ ಎಂದು ಪ್ರಶ್ನೆ ಮಾಡಬೇಕು" ಎಂದು ಸಚಿವರು ಕರೆ ನೀಡಿದರು. "ನಮಗೆ ರಾಜ್ಯದ ಹೆಣ್ಣು ಮಕ್ಕಳ ಮೇಲೆ ನಂಬಿಕೆ ಮತ್ತು ವಿಶ್ವಾಸ ಹೆಚ್ಚಿದೆ. ನಾವು ಕಾಂಗ್ರೆಸ್‌ಗೆ ಮತ ನೀಡಿದವರಿಗೆ ಮಾತ್ರ ಗ್ಯಾರಂಟಿ ಯೋಜನೆ ಕೊಟ್ಟಿದ್ದೇವೆಯೇ?. ಬಿಜೆಪಿಗೆ ಮತ ಹಾಕಿದವರಿಗೂ ಗ್ಯಾರಂಟಿ ಯೋಜನೆ ತಲುಪಿದೆಯಲ್ಲ. ಈ ಬಗ್ಗೆ ನೀವು ಕೂಡ ನಿಮ್ಮ ನೆರೆ ಹೊರೆಯವರಿಗೆ ಜಾಗೃತಿ ಮೂಡಿಸಬೇಕು" ಎಂದು ಸಚಿವರು ತಿಳಿಸಿದರು. "ಬಿಜೆಪಿಗರು ಕೇಂದ್ರದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಬ್ಯಾಂಕ್‌ನಲ್ಲಿ ಶೂನ್ಯ ಖಾತೆ ತೆಗೆಯಿರಿ, ಪ್ರತಿ ಮಹಿಳೆಯರ ಖಾತೆಗೆ ತಲಾ 15 ಲಕ್ಷ ಹಣ ಹಾಕುತ್ತೇವೆ ಎಂದು ಭರವಸೆ ನೀಡಿದ್ದರು.

ಮಹಿಳೆಯರು ಮುಗಿಬಿದ್ದು, ಖಾತೆ ತೆರೆದರು. ಆದರೆ ಕೇಂದ್ರ ಸರ್ಕಾರದಿಂದ ಮಹಿಳೆಯರ ಖಾತೆಗೆ ಹಣ ಬರಲಿಲ್ಲ. ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಮಹಿಳೆಯರ ಖಾತೆಗೆ ಹಣ ಹಾಕುವ ಕೆಲಸ ಮಾಡುತ್ತಿದೆ" ಎಂದರು. "ಗ್ಯಾರಂಟಿ ಯೋಜನೆಯಿಂದ ಮಹಿಳೆಯರ ಜೀವನ ಗುಣಮಟ್ಟ ಸುಧಾರಣೆ ಮಾಡಲಾಗಿದೆ. ಬಿಜೆಪಿ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ, ಗ್ಯಾರಂಟಿ ಯೋಜನೆಗೆ ಕುತ್ತು ಬರಲಿದೆ. ಕಾಂಗ್ರೆಸ್ ಮತ್ತೊಮ್ಮೆ ಅಧಿಕಾರಕ್ಕೆ ಬಂದರೆ ನಿಮ್ಮ ಖಾತೆಗೆ ಹಣ ಬರುವುದು ಮುಂದುವರೆಯಲಿದೆ" ಎಂದು ಸಚಿವರು ಭರವಸೆ ನೀಡಿದರು.

"ಕೇಂದ್ರ ಸರ್ಕಾರದ್ದು ಎಲ್ಲವೂ ಹಣ ವ್ಯಯಿಸದ ಯೋಜನೆಗಳಾಗಿವೆ. ಸ್ವಚ್ಛ ಭಾರತ ಯೋಜನೆ, ಪೊರಕೆಯೂ ನಮ್ಮದೆ, ಕಸವೂ ನಮ್ಮದೆ, ಕಸ ಬಳಿಯುವವರು ಕೂಡ ನಾವೇ. ಯೋಜನೆಮಾತ್ರಕೇಂದ್ರದ್ದು"ಎಂದು ಟೀಕಿಸಿದರು. "ಬಿಜೆಪಿಯವರಿಗೆ ಬಡವರು ನೆಮ್ಮದಿಯಾಗಿ ಬದುಕುವುದು ಇಷ್ಟವಿಲ್ಲ. ಹೀಗಾಗಿ ಯುಪಿಎ ನೇತೃತ್ವದ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿಯ ಯೋಜನೆಯ ಹೆಸರು ಬದಲಾಯಿಸಿ, ಕಾಯ್ದೆಗೆ ತಿದ್ದುಪಡಿ ತಂದಿದ್ದಾರೆ. ಅವರು ಯೋಜನೆಗಳನ್ನು ನೀಡುವುದು ಕೇವಲ ಉಳ್ಳವರಿಗೆ ಮಾತ್ರ. ಅವರ ಕಣ್ಣಿಗೆ ಕಾಣುವುದು ಕೇವಲ ಅಂಬಾನಿ, ಅದಾನಿ ಮಾತ್ರ" ಎಂದು ಸಚಿವರು ಆರೋಪಿಸಿದರು.

# ಗೃಹ ಆರೋಗ್ಯ ಯೋಜನೆಯಡಿ ಮನೆ ಬಾಗಿಲಿಗೆ ಆರೋಗ್ಯ ಸೇವೆಗಳು

ನೈಜ್ಯ ದೆಸೆ ನ್ಯೂಸ್

**ವಿಶೇಷವರದಿ: ಇತ್ತೀಚಿನ ದಿನಗಳಲ್ಲಿ ಜನರಲ್ಲಿ ವಿವಿಧ ಕಾರಣಗಳಿಂದಾಗಿ ಹೆಚ್ಚಿನ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಆಧುನಿಕ ಜೀವನ ಶೈಲಿ ಸೇರಿದಂತೆ ಅನೇಕ ಕಾರಣಗಳಿಂದ ಆರೋಗ್ಯ ಸಮಸ್ಯೆಗಳು ಗಂಭೀರವಾಗುತ್ತಿವೆ. ಇನ್ನು ಅನೇಕ ಆರೋಗ್ಯ ಸಮಸ್ಯೆಗಳಿಗೆ ರಕ್ತದೊತ್ತಡ ಮತ್ತು ಸಕ್ಕರೆ ಕಾಯಿಲೆ ಪ್ರಮುಖ ಕಾರಣವಾಗಿವೆ. ಆದರೆ ಹೆಚ್ಚಿನ ಜನರು ತಮಗೆ ಸಕ್ಕರೆ ಕಾಯಿಲೆ, ರಕ್ತದೊತ್ತಡ ಇದ್ದರೂ ತಪಾಸಣೆ ಮಾಡಿಸಿಕೊಳ್ಳುತ್ತಿಲ್ಲ, ಚಿಕಿತ್ಸೆ ಪಡೆದುಕೊಳ್ಳುತ್ತಿಲ್ಲ.**

ಇದಕ್ಕಾಗಿ ಕರ್ನಾಟಕ ಘನ ಸರಕಾರವು ಆರೋಗ್ಯ ಇಲಾಖೆಯ ಮೂಲಕ ರಾಜ್ಯದ ಜನರ ಆರೋಗ್ಯ ಕಾಪಾಡುವ ಉದ್ದೇಶದಿಂದ ಗೃಹ ಆರೋಗ್ಯ ಯೋಜನೆಯಡಿ 14 ಆರೋಗ್ಯ ಸೇವೆಗಳನ್ನು ಗ್ರಾಮೀಣ ಭಾಗದ ಜನತೆಗೆ ಒದಗಿಸಿದ ನಂತರ ಸದರಿ ಸೇವೆಗಳ ಸದುಪಯೋಗದ ಮಹತ್ವನ್ನರಿತು ನಗರ ಪ್ರದೇಶದ ಆರ್ಥಿಕ ದುರ್ಬಲ ವರ್ಗದ ಜನತೆಗೂ ಸಹ ಶೀಘ್ರದಲ್ಲಿಯೇ ಯೋಜನೆಯನ್ನು ವಿಸ್ತರಿಸಿ ಸೌಲಭ್ಯ ಒದಗಿಸಲು ಸನ್ಮಾನ್ಯ ಮುಖ್ಯಮಂತ್ರಿಗಳು ರವರ ಆದೇಶದಂತೆ ರಾಜ್ಯ ಸರ್ಕಾರವು ಅಗತ್ಯ ಸಿದ್ಧತೆ ಕೈಗೊಂಡಿದೆ. 2024ರ ಅಕ್ಟೋಬರ್ 24ರಂದು ಯೋಜನೆಗೆ ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿತ್ತು.

ರಾಜ್ಯ ಸರ್ಕಾರವು ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆಗಾಗಿ ಗೃಹ ಆರೋಗ್ಯ ಯೋಜನೆಯನ್ನು ಸರ್ಕಾರವು ನಂತರದಲ್ಲಿ





ರಾಜ್ಯದಾದ್ಯಂತ ವಿಸ್ತರಿಸಿತು. ಯೋಜನೆಯ ವಿಸ್ತರಣೆಯಿಂದಾಗಿ ರಾಜ್ಯದ ಎಲ್ಲಾ ಜನರಿಗೆ ಯೋಜನೆಯ ಪ್ರಯೋಜನ ಲಭ್ಯವಾಯಿತು. ಅತಿ ಶೀಘ್ರದಲ್ಲಿ ನಗರದ ಪ್ರದೇಶದ ಆರ್ಥಿಕ ದುರ್ಬಲ ವರ್ಗದವರಿಗೂ ಮನೆ ಬಾಗಿಲಿಗೆ ಆರೋಗ್ಯ ಸೇವೆಯನ್ನು ಒದಗಿಸಲಿದೆ. ಇದು ಕೇವಲ ರೋಗ ತಪಾಸಣೆಯಷ್ಟೇ ಅಲ್ಲದೇ ರೋಗ ಪೀಡಿತ–ರಿಗೆ ಉಚಿತ ಔಷಧಿಗಳನ್ನು ಖಚಿತಪಡಿಸುತ್ತದೆ. ಈ ಯೋಜನೆಯಿಂದ ಏನೆಲ್ಲಾ ಸೌಲಭ್ಯಗಳಿವೆ? ಎಂಬುದನ್ನು ತಿಳಿಯೋಣ ಬನ್ನಿ.. ಯೋಜನೆಯ ಉದ್ದೇಶಗಳೇನು ಗೃಹ ಆರೋಗ್ಯ ಯೋಜನೆಯ ಮುಖ್ಯ ಉದ್ದೇಶವೆಂದರೆ ರೋಗಗಳನ್ನು ಶೀಘ್ರವಾಗಿ ಪತ್ತೆಹಚ್ಚುವುದು. ಇದು ಅಕಾಲಿಕ ಸಾವು ಮತ್ತು ಇತರ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟುವ ಗುರಿಯನ್ನು ಹೊಂದಿದೆ.

ಮಧುಮೇಹ, ಅಧಿಕ ರಕ್ತದೊತ್ತಡ, ಸ್ತನ, ಗರ್ಭಕಂಠ ಮತ್ತು ಬಾಯಿಯ ಕ್ಯಾನ್ಸರ್ ಮುಂತಾದ ಸಾಂಕ್ರಾಮಿಕವಲ್ಲದ ಕಾಯಿಲೆಗಳನು (ಎನ್‌ಸಿಡಿ) ಹೆಚ್ಚಿನ ಚಿಕಿತ್ಸೆಗಾಗಿ ಪರೀಕ್ಷಿಸಲಾಗುತ್ತದೆ. ಈ ಯೋಜನೆಯು ಅಬ್ಸ್ಟ್ರಕ್ಟಿವ್ ಸ್ಲೀಪ್ ಅಪ್ನಿಯಾ (ಒಎಸ್‌ಒ) ಮತ್ತು ಇತರ ಮಾನಸಿಕ ಆರೋಗ್ಯ ಪರಿಸ್ಥಿತಿಗಳ ರೋಗಲಕ್ಷಣಗಳನ್ನು ಸಹ ಪರಿಶೀಲಿಸುತ್ತದೆ. ಅರ್ಹ ಪ್ರಕರಣಗಳಿಗೆ ಉಚಿತ ಔಷಧಿಗಳನ್ನು ಸಹ ಒದಗಿಸಲಾಗುವುದು. ವರದಿಗಳ ಪ್ರಕಾರ ಒಟ್ಟು ಜನಸಂಖ್ಯೆಯ ಶೇ26.9 ರಷ್ಟು ಜನರು ಅಧಿಕ ರಕ್ತದೊತ್ತಡದಿಂದ ಬಳಲುತ್ತಿದ್ದಾರೆ. ಅಲ್ಲದೆ ಶೇ.15.6 ರಷ್ಟು ಜನರು ಮಧುಮೇಹದಿಂದ ಬಳಲುತ್ತಿದ್ದಾರೆ. ಇದೆಲ್ಲವನ್ನು ಮನಗಂಡು ಕರ್ನಾಟಕ ರಾಜ್ಯ ಸರ್ಕಾರ ಈ ಯೋಜನೆಯನ್ನು ಪ್ರಾರಂಭಿಸಿತು. ಈ ಸಂಖ್ಯೆಗಳನ್ನು ಕಡಿಮೆ ಮಾಡಲು ಮತ್ತು ಎಲ್ಲರನ್ನೂ ಆರೋಗ್ಯವಾಗಿಡಲು ಯೋಜನೆಯನ್ನು ಜಾರಿಗೊಳಿಸಲಾಗಿದೆ. ಗೃಹ ಆರೋಗ್ಯ ಯೋಜನೆಯ ಪ್ರಯೋಜನಗಳು ಏನು: ಗೃಹ ಆರೋಗ್ಯ ಯೋಜನೆಯು ಕರ್ನಾಟಕದ ಎಲ್ಲಾ ಜನರಿಗೆ ಅವರ ಮನೆ ಬಾಗಿಲಲ್ಲೇ ಆರೋಗ್ಯ ತಪಾಸಣೆಯನ್ನು ಖಚಿತಪಡಿಸುತ್ತದೆ.

ಗೃಹ ಆರೋಗ್ಯ ಯೋಜನೆಯು ರೋಗಗಳನ್ನು ಮೊದಲೇ ಪತ್ತೆಹಚ್ಚುವುದನ್ನು ಖಚಿತಪಡಿಸುತ್ತದೆ ಮತ್ತು ಗಮನಾರ್ಹ ಆರೋಗ್ಯ ಸಮಸ್ಯೆಗಳು ಮತ್ತು ಅಕಾಲಿಕ ಮರಣಗಳನ್ನು ತಡೆಗಟ್ಟುತ್ತದೆ. ಅಗತ್ಯವಿರುವವ–ರಿಗೆ ಉಚಿತ ಔಷಧಿಗಳನ್ನು ನೀಡಲಾಗುವುದು, ಚಿಕಿತ್ಸೆಯನ್ನು ಪಡೆಯಲು ಸಾಧ್ಯವಾಗದವರ ವೆಚ್ಚವನ್ನು ಸರ್ಕಾರ ಭರಿಸಲಿದ್ದು, ಈ ಯೋಜನೆ ಆರ್ಥಿಕವಾಗಿ ಹಿಂದುಳಿದವರಿಗೆ ವರದಾನವಾಗಿದೆ. ರೋಗಗಳು ಪತ್ತೆಯಾದ ನಂತರ, ಜನರು ವಿಶೇಷ ಚಿಕಿತ್ಸೆಗಾಗಿ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಿಸಿ ಕೊಡಲಾಗುವುದು. ಗೃಹ ಆರೋಗ್ಯ ಯೋಜನೆಯ ಪ್ರಮುಖ ಅಂಶಗಳು: ಗೃಹ ಆರೋಗ್ಯ ಯೋಜನೆ, ಕರ್ನಾಟಕದ ಅತಿ–ದೊಡ್ಡ ಆರೋಗ್ಯ ರಕ್ಷಣಾ ಉಪಕ್ರಮಗಳಲ್ಲಿ ಒಂದಾಗಿದ್ದು, ತನ್ನ ಎಲ್ಲಾ ನಾಗರಿಕರನ್ನು ಒಳಗೊಳ್ಳುತ್ತದೆ. ಕರ್ನಾಟಕ ರಾಜ್ಯ ಸರ್ಕಾರವು 15ನೇಯ ಹಣಕಾಸು ಯೋಜನೆಯಡಿ ಅನುಷ್ಠಾನ ಮಾಡುತ್ತಿದ್ದು, ಯೋಜನೆಯಡಿ ಆರಂಭದಲ್ಲಿ ಜಿಲ್ಲೆಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಾದ ರಾಯಚೂರು, ಸಿಂಧನೂರು ನಗರ ವ್ಯಾಪ್ತಿಯ ಸುಮಾರು 1,04,342 ಜನರ ತಪಾಸಣೆ ಕೈಗೊಂಡು,

ಅವರಲ್ಲಿ ಮೂವತ್ತು ವರ್ಷಕ್ಕಿಂತ ಮೇಲ್ಪಟ್ಟ ಸುಮಾರು 41,757 ಜನರಿಗೆ ಸೇವೆ ಒದಗಸುವ ಗುರಿಯನ್ನು ಹೊಂದಿದೆ. ಇದಕ್ಕಾಗಿ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾ–ರಿಗಳು ಮತ್ತು ಆಶಾ ಕಾರ್ಯಕರ್ತೆರು ಪ್ರತಿದಿನ ಮನೆಗೆ ಭೇಟಿ ನೀಡಿ ನಿಗದಿತ ನಮೂನೆಯ ಪ್ರಶ್ನಾವಳಿಗಳ ಮೂಲಕ ರೋಗ ಸಮಸ್ಯೆ ಪತ್ತೆ ಹಚ್ಚಲು ಸಮಾಲೋಚನೆ ನಡೆಸಲಿದ್ದಾರೆ. ತದ ನಂತರ ಉಚಿತ ಆರೋಗ್ಯ ತಪಾಸಣೆ ಕೈಗೊಂಡು ಚಿಕಿತ್ಸೆಯ ಭಾಗವಾಗಿ ಉಚಿತ ಔಷಧಿಗಳನ್ನು ಸಹ ನೀಡಲಾಗುವುದು. ಹೆಚ್ಚಿನ ಚಿಕಿತ್ಸೆ: ಆರೋಗ್ಯ ತಪಾಸಣೆಯ ಬಳಿಕ ರೋಗಿಗೆ ಚಿಕಿತ್ಸೆಯ ಅಗತ್ಯವಿದ್ದರೆ ಔಷಧಿ ವಿತರಣೆ ಮಾಡಲಾಗುವುದು, ಅಗತ್ಯವಿರುವ ರೋಗಿಗಳನ್ನು ಆಸ್ಪತ್ರೆಗೆ ದಾಖಲಿಸಲಾಗುವುದು.

ಹಿರಿಯ ನಾಗರಿಕರು, ಅಂಗವಿಕಲ ವ್ಯಕ್ತಿಗಳು ಮತ್ತು ಹೊರರೋಗಿಗಳ ಆರೈಕೆಯ ಅಗತ್ಯವಿರುವ ರೋಗಿಗಳಿಗೆ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆ. ಅಧಿಕ ರಕ್ತದೊತ್ತಡ ಮತ್ತು ಮಧುಮೇಹ ಹೊಂದಿರುವ ರೋಗಿಗಳನ್ನು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಸಿ ಚಿಕಿತ್ಸೆ ಒದಗಿಸಲಾಗುತ್ತದೆ. ಒಟ್ಟಾರೆಯಾಗಿ ಕರ್ನಾಟಕ ಸರಕಾರವು ನಿಮ್ಮ ಅರೋಗ್ಯ–ನಮ್ಮ ಆಧ್ಯತೆ ಎಂಬ ಧ್ಯೆಯದಂತೆ ಸಮುಯದಾಯದ ಕಟ್ಟಕಡೆಯ ವ್ಯಕ್ತಿಗೂ ಗುಣಮಟ್ಟದ ಅರೋಗ್ಯ ಸೇವೆಗಳನ್ನು ನೀಡುವ ಜೊತೆಗೆ ಕುಟುಂಬವು ನೆಮ್ಮದಿಯ ಜೀವನ ಸಾಗಿಸಲು ದೃಡ ಹೆಜ್ಜೆಗಳನ್ನು ಇಟ್ಟಿದೆ.

–ಡಾ.ಸುರೇಂದ್ರ ಬಾಬು
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ರಾಯಚೂರು.

–ಡಾ.ಚಂದ್ರಶೇಖರಯ್ಯ ಸ್ವಾಮಿ
ಆರೋಗ್ಯ ಇಲಾಖೆಯ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ರಾಯಚೂರು.